ವಿಜಯಪುರ | ಸಂಪುಟ 02 | ಸಂಚಿಕೆ 06 | ಪುಟ 4 | ₹ 3.00
https://udayarashminews.com
udayarashmi 7026028778

# ಉದಯ ರಶ್ಮಿ
Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ    Editor: Indushekhar Manur

editor.udayarashmi@gmail.com    RNI NO: KARKAN/2023/86203    ಬುಧವಾರ, ಫೆಬ್ರವರಿ 20, 2024

“ಆಲಮಟ್ಟಿ ಜಲಾಶಯದಿಂದ ಫೆ. 19ರಿಂದ ಮಾರ್ಚ 10ರವರೆಗೆ ಮುಳವಾಡ ಏತ ನೀರಾವರಿಯ ಹಾಗೂ ಚಿಮ್ಮಲಗಿ ಏತ ನೀರಾವರಿ ಕಾಲುವೆ ವ್ಯಾಪ್ತಿಯ 96 ಕೆರೆಗೆಳಿಗೆ 1.8 ಟಿಎಂಸಿ ನೀರು ಕುಡಿಯುವ ಉದ್ಧೇಶಕ್ಕಾಗಿ ನೀರು ಹ–ರಿಸಲಾಗುತ್ತಿದೆ.”



– ಟಿ.ಭೂಬಾಲನ್
ಜಿಲ್ಲಾಧಿಕಾರಿಗಳು, ವಿಜಯಪುರ


**“ಜ್ಞಾನ ದೇಗುಲವಿದು ಕೈ ಮುಗಿದು ಒಳಗೆ ಬಾ” ಘೋಷವಾಕ್ಯ ‘ಜ್ಞಾನ ದೇಗುಲವಿದು ಧೈರ್ಯವಾಗಿ ಪ್ರಶ್ನಿಸು’ ಎಂದು ಬದಲಾವಣೆ**

# ಕುವೆಂಪು ಘೋಷವಾಕ್ಯಕ್ಕೆ ಕತ್ತರಿ! :ಬಿಜೆಪಿ ಕಿಡಿ

**ಉದಯರಶ್ಮಿ ನ್ಯೂಸ್**

ಬೆಂಗಳೂರು: ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ಶಾಲೆಗಳ ಪ್ರವೇಶದ್ವಾರದಲ್ಲಿರುವ ಘೋಷವಾಕ್ಯ ಬದಲಾವಣೆ ವಿಚಾರ ಇದೀಗ ಭಾರೀ ಚರ್ಚೆಗೆ ಗ್ರಾಸವಾಗಿದೆ. ಈ ಮೊದಲು ಶಾಲೆಗಳ ಪ್ರವೇಶದ್ವಾರದಲ್ಲಿದ್ದ ರಾಷ್ಟ್ರಕವಿ ಕುವೆಂಪು ಅವರ ‘ಜ್ಞಾನ ದೇಗುಲವಿದು ಕೈ ಮುಗಿದು ಒಳಗೆ ಬಾ” ಘೋಷವಾಕ್ಯವನ್ನು ಬದಲಾಯಿಸಲಾಗಿದೆ. ‘ಜ್ಞಾನ ದೇಗುಲವಿದು ಧೈರ್ಯವಾಗಿ ಪ್ರಶ್ನಿಸು’ ಎಂದು ಬದಲಾವಣೆ ಮಾಡಲಾಗಿದೆ.

ವಿಜಯಪುರ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಪ್ರವೇಶ ದ್ವಾರದಲ್ಲಿ ಕುವೆಂಪು ಅವರ ಬರಹವನ್ನು ಬದಲಿಸಿ ಹಾಕಿ ವಿವಾದಕ್ಕೆ ನಾಂದಿ ಹಾಡಿದೆ. ಘೋಷವಾಕ್ಯ ಬದಲಾವಣೆಗೆ ಸರ್ಕಾರದಿಂದ ಯಾವುದೇ ಅಧಿಕೃತ ಆದೇಶವಿಲ್ಲ. ಆದೇಶ ನೀಡಿದರೆ ಮತ್ತೊಂದು ವಿವಾದಕ್ಕೆ ಕಾರಣವಾಗುತ್ತದೆಂದು ಆದೇಶವಿಲ್ಲದೆ ಕೇವಲ ಮೌಖಿಕವಾಗಿ ಸೂಚನೆ ನೀಡಿರುವ ಹಿನ್ನೆಲೆ ಘೋಷವಾಕ್ಯ ಬದಲಾವಣೆ ಮಾಡಲಾಗಿದೆ. ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಕ್ಯಾಪ್ಟನ್ ಮಣಿವಣ್ಣನ್ ಸೂಚನೆ ಮೇರೆಗೆ ಘೋಷವಾಕ್ಯ ಬದಲಾವಣೆ ಮಾಡಲಾಗಿದೆ ಎನ್ನಲಾಗಿದೆ.



“ರಾಷ್ಟ್ರಕವಿ ಕುವೆಂಪು ಅವರ ಪವಿತ್ರವಾದ ಬರಹ “ಜ್ಞಾನ ದೇಗುಲವಿದು, ಕೈಮುಗಿದು ಒಳಗೆ ಬನ್ನಿ” ತಿದ್ದುಪಡಿ ಮಾಡಿರುವುದು ಕುವೆಂಪು ಅವರಿಗೆ ಮಾಡಿರುವ ಅವಮಾನ ಖಂಡನೀಯ. ಸರಕಾರಿ ಶಾಲೆಗಳಲ್ಲಿ ಸೌಲಭ್ಯಗಳನ್ನು ಹೆಚ್ಚಿಸಿ ಉನ್ನತಮಟ್ಟದ ಶಿಕ್ಷಣಕ್ಕೆ ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಬೇಕೆ ವಿನಹ ರಾಜಕೀಯ ದುರುದ್ದೇಶದಿಂದ ಕೂಡಿದ ತಿದ್ದುಪಡಿಗಳಲ್ಲ. ಇಂತಹ ಘನಕಾರ್ಯಗಳು ಕಾಂಗ್ರೆಸ್ ಸರಕಾರದ ಗುಣಮಟ್ಟವನ್ನು ಎತ್ತಿ ತೋರಿಸುತ್ತಿದೆ, ಇದರ ಬದಲಿಗೆ ವಿಧಾನ ಸೌಧದ ಮುಂದೆ ಇದು ನಿಮ್ಮ ಸರಕಾರ ಧೈರ್ಯವಾಗಿ ಪ್ರಶ್ನಿಸಿ ಅಂತ ಬರೆದು ಹಾಕಿದ್ರೆ ಚೆನ್ನಾಗಿ ಇರುತಿತ್ತು ಏನೋ?”

– **ಡಾ.ಗೌತಮ್.ಆರ್.ಚೌಧರಿ,** ಬಿಜೆಪಿ ಮುಖಂಡರು

**ಘೋಷವಾಕ್ಯಕ್ಕೆ ಕತ್ತರಿ: ಸಚಿವರಿಂದ ಸಮರ್ಥನೆ**

ಸರ್ಕಾರಿ ಶಾಲೆಗಳಲ್ಲಿ ‘ಜ್ಞಾನ ದೇಗುಲವಿದು. ಕೈ ಮುಗಿದು ಒಳಗೆ ಬಾ’ ಎಂಬ ಧ್ಯೇಯವಾಕ್ಯವನ್ನು ‘ಜ್ಞಾನ ದೇಗುಲವಿದು.. ಧೈರ್ಯವಾಗಿ ಪ್ರಶ್ನಿಸು’ ಎಂಬುದಕ್ಕೆ ಬದಲಾಯಿಸಲಾಗಿದೆ. ಈ ಕುರಿತ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ಮತ್ತು ಮಾಧ್ಯಮಗಳಲ್ಲಿ ವೈರಲ್ ಆಗುತ್ತಿದೆ. ಇದೇ ವಿಚಾರವಾಗಿ ಇದೀಗ ರಾಜ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷ ಬಿಜೆಪಿ ತೀವ್ರ ಕಿಡಿಕಾರಿದೆ. ಬಡ ಶಾಲಾ ಮಕ್ಕಳ ಬ್ರೈನ್ ವಾಶ್ ಮಾಡಲು ‘ಧ್ಯೇಯ ವಾಕ್ಯ’ ಬದಲಾವಣೆ ಮಾಡಲಾಗಿದೆ. ಈ ಮೂಲಕ ಹಿಂದುಳಿದ ಬಡ ವಿದ್ಯಾರ್ಥಿಗಳು ಹಿಂದೂ ಸಂಸ್ಕೃತಿ, ಸಂಸ್ಕಾರವನ್ನು ವಿರೋಧಿಸುವಂತೆ ವಿಷ ಬೀಜ ಬಿತ್ತಿ, ಎಡಬಿಡಂಗಿ ಸಿದ್ಧಾಂತವನ್ನು ಹೇರಲಾಗುತ್ತಿದೆ ಎಂದು ಹೇಳಿದೆ. ವಸತಿ ಶಾಲೆಗಳಲ್ಲಿ ಘೋಷವಾಕ್ಯ ಬದಲಾವಣೆ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿರುವ ಬೆನ್ನಲ್ಲೇ ಸರ್ಕಾರ ಈ ಬಗ್ಗೆ ಸಮಥ–ರ್ನೆ ನೀಡಿದೆ. ಸಾಮಾಜಿಕ ಸ್ಥಿತಿಗಳ ತಕ್ಕಂತೆ ಬದಲಾವಣೆ ಆಗಬೇಕು. ಧೈರ್ಯವಾಗಿ ಪ್ರಶ್ನಿಸಿ ಎಂದಿದ್ದರಲ್ಲಿ



ತಪ್ಪಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಸಮರ್ಥಿಸಿಕೊಂಡಿದ್ದರೆ, ಘೋಷವಾಕ್ಯ ಬದಲಾವಣೆಗೆ ಕಾರಣ ಏನೆಂಬುದು ಗೊತ್ತಿಲ್ಲ ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ.

## ರಾಜ ನುಡಿ

1945 ರಲ್ಲಿ ಜಪಾನ್ ಮೇಲೆ ಅಣುಬಾಂಬ ದಾಳಿಯಾದ ಮೇಲೆ ಹತ್ತು ವರ್ಷಗಳ ಗೋಲ್ ಸೆಟ್ ಮಾಡಿಕೊಂಡಿತು. ಅದೇ ಪ್ರಕಾರ ಜಪಾನ್ 1960 ರೊಳಗೆ ಪ್ರಪಂಚದ ಓಂ.1 ಟೆಕ್ಸ್ ಟೈಲ್ ತಯಾರಿಸುವ ದೇಶವಾಯ್ತು. 1970 ರ ವೇಳೆಗೆ ಪ್ರಪಂಚದ ಓಂ.1 ಸ್ಟೀಲ್ ತಯಾರಿಕಾ ದೇಶವಾಯ್ತು. 1980 ರ ವೇಳೆಗೆ ಪ್ರಪಂಚದ ಓಂ.1 ಆಟೋಮೋಬೈಲ್ ತಯಾ–ರಿಕಾ ದೇಶವಾಯ್ತು. ವೈಯಕ್ತಿಕ ಬದುಕಲ್ಲಿಯೂ ನಾವು ಕೆಳಗೆ ಬಿದ್ದಾಗ ಮೇಲೇಳಲು ಇದು ಪ್ರೇರಣೆಯಲ್ಲವೇ!.

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 305

*ನಿಂದಕರ ನುಡಿಗೆ ಗಮನ ಬೇಡ*

*ಅಂಧಕಾರದ ದೆಸೆಯಿಂದ ಚಂದ್ರನ ಪ್ರಭೆಯಾಯಿತು.*
*ನಿಂದಕರ ನುಡಿಯ ಏಡಿಸಲ್ಕೆ ಶಿವಭಕ್ತಿಯ ಪ್ರಭೆಯಾಯಿತು.*
*ಅಹುದೆಂದಡೆ ಅಲ್ಲವೆಂದತಿಗಳೆವರು.*
*ಕುತರ್ಕ ಶಾಸ್ತ್ರದಿಂದ ಯಮಗತಿಗರ ಕೂಡೆ ನಾನಾ ಜನ್ಮಕ್ಕೇರದೆ, ಶಿವಾಚಾರದ ಪಥವ ತೋರಿಸಯ್ಯಾಕಲಿದೇವರದೇವ.*
*– ಮಡಿವಾಳ ಮಾಚಿದೇವಯ್ಯನವರು*

ಈ ವಚನದಲ್ಲಿ ಮಡಿವಾಳಮಾಚಿದೇವನವರು. ದುಷ್ಟರ ಸಹವಾಸದಿಂದ ದೂರ ಇರುವ ಬಗ್ಗೆ ತಿಳಿ ಹೇಳಿದ್ದಾರೆ. ಪ್ರಾರಂಭದಸಾಲಿನಲ್ಲಿ ಅಂಧಕಾರದ ದೆಸೆಯಿಂದ ಎನ್ನುವಲ್ಲಿ ಚಂದ್ರಗ್ರಹಣದ ಸಂದರ್ಭದಲ್ಲಿ ಭೂಮಿಯ ನೆರಳು ಚಂದ್ರನನ್ನು ಸಂಪೂರ್ಣ ಆವ–ರಿಸಿದಾಗ ಚಂದ್ರನ ಅಂಚಿನಲ್ಲಿ ಬೆಳ್ಳಗಿನ ಪ್ರಭೆ ಮೂಡುತ್ತದೆ ಇದನ್ನು ವೈಜ್ಞಾನಿಕವಾಗಿ ಜುಚಿಟಂಟಿಜ ಡಿಟಿಂ ಎಂದು ಕರೆಯುತ್ತಾರೆ ನೋಡಲು ಬಹಳ ಆಕರ್ಷಕವಾಗಿರುತ್ತದೆ. ಮಡಿವಾಳ ಮಾಚಿದೇವರು ಸತ್ಯಶುದ್ಧ ಕಾಯಕದಲ್ಲಿರುವವರಿಗೆ ತೊಂದರೆ ಕೊಡುವವರ ಸಂಕೇತವಾಗಿ ಗ್ರಹಣದ ಚಿತ್ರಣವನ್ನು ಬಳಸಿದ್ದಾರೆ. ಅವರು ಕೊಡುವ ತೊಂದರೆಯಫಲವಾಗಿ ಶರಣನ ವ್ಯಕ್ತಿತ್ವ ಮತ್ತಷ್ಟು ಪ್ರಕಾಶಮಾನವಾಗಿ ಹೊರಹೊಮ್ಮುತ್ತದೆ. ಇದನ್ನು ಚಂದ್ರಪ್ರಭೆ ಎಂದು ಹೇಳಿದ್ದಾರೆ. ಇದೇ ಭಾವವನ್ನು ವಚನದ ಎರಡನೆಯ ಸಾಲಿನಲ್ಲಿ ನಿಂದಕರ ನುಡಿಗಳು ನಮ್ಮ ತಪ್ಪನ್ನು ತಿದ್ದುವ ನಿಟ್ಟಿನಲ್ಲಿ ಸಹಾಯಕವಾಗುತ್ತದೆ ಎಂದು ಭಾವಿಸಬೇಕು ನಾವು ಯಾವುದು ಸತ್ಯ ಎನ್ನುತ್ತೇವೊ ನಿಂದಕರು ಅದನ್ನು ಅಲ್ಲಗಳೆಯುತ್ತಾರೆ. ಅಲ್ಲಗಳೆಯಲು ತರ್ಕ, ವಾದ, ಶಾಸ್ತ್ರಗಳ ಸಹಾಯದಿಂದ ವಾದಮಂಡಿಸುತ್ತಾರೆ ಅವರೊಂದಿಗೆ ಚರ್ಚೆಗೆ ಇಳೆಯುವುದು ವ್ಯರ್ಥವೆಂದು ತಿಳಿಯುತ್ತ ನನ್ನನ್ನು ಅವರಂತಾಗಿಸದೆ ಶಿವ ಪಥವ ತೋರು ಎಂದು ಭಿನ್ನಿಸಿಕೊಂಡಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

**ಹಲವೆಡೆ ಅರ್ಧಕ್ಕೆ ನಿಂತ ಜೆಜೆಎಂ ಕಾಮಗಾರಿ | ಅಗೆದ ಸಿಸಿ ರಸ್ತೆ | ಸಂಚಾರಕ್ಕೆ ಸಂಚಕಾರ**

# ಜೆಜೆಎಂ ಕಾಮಗಾರಿಗೆ ಮುಕ್ತಿ ಯಾವಾಗ?

**ಉದಯರಶ್ಮಿ ನ್ಯೂಸ್**
**–ಜಿ ಎನ್ ಬೀರಗೊಂಡ (ಮುತ್ತು)**

ಢವಳಗಿ: ಗ್ರಾಮೀಣ ಪ್ರದೇಶದಲ್ಲಿ ಸಾರ್ವಜನಿಕರು ಕುಡಿಯುವ ನೀರಿಗಾಗಿ ಪರದಾಡುತ್ತಿರುವ ಹಿನ್ನೆಲಿಯಲ್ಲಿ ಕೇಂದ್ರ ಸರಕಾರವು ಜಲ ಜೀವನ ಮಷಿನ್ ಎಂಬ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದಿದ್ದು, ಡವಳಾರ ಗ್ರಾಮ ಸೇರಿದಂತೆ ಹಲವು ಗ್ರಾಮಗಳಲ್ಲಿ ಕಾಮಗಾರಿ ಪೂರ್ಣಗೊಳ್ಳದೆ ಗ್ರಾಮಸ್ಥರ ಸುಗಮ ಸಂಚಾರಕ್ಕೆ ತೊಂದರೆಯಾಗಿ ಪರಿಣಮಿಸಿದೆ.

ಈ ಯೋಜನೆಗಾಗಿ ಸರಕಾರ ಕೋಟಿ ಕೋಟಿ ಹಣ ವೆಚ್ಚಮಾಡಿದೆ. ಆದರೂ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಹೆಚ್ಚುತ್ತಲೇ ಇದೆ. ಇದಕ್ಕೆ ಕಾರಣ ಎರಡು ವರ್ಷ ಕಳೆದರೂ ಜೆಜೆಎಂ ಕಾಮಗಾರಿಯು ಇಲ್ಲಿಯವರೆಗೂ ಗ್ರಾಮದಲ್ಲಿ ಸಂಪೂರ್ಣವಾಗಿಲ್ಲ. ಮತ್ತು ಆದ ಅಪೂರ್ಣ ಕಾಮಗಾರಿಯೂ ಸಂಪೂರ್ಣ ಕಳಪೆಮಟ್ಟದ್ದಾಗಿದೆ ಎಂಬುದು ಸಾರ್ವಜನಿಕರ ಆರೋಪವಾಗಿದೆ.



“ಕಳೆದ ಎರಡು ವರ್ಷದಿಂದ ಪ್ರಾರಂಭವಾದ ಜೆಜೆಎಂ ಕಾಮಗಾರಿಯು ಇನ್ನೂ ಪೂರ್ಣಗೊಂಡಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯದಿಂದ ಕಾಮಗಾರಿ ಅರ್ಧಕ್ಕೆ ನಿಂತಿದೆ. ಅಧಿಕಾರಿಗಳು ಅದನ್ನು ಮತ್ತೆ ಪರಿಶೀಲಿಸಿ ಸ್ಥಗಿತಗೊಂಡ ಕಾಮಗಾ–ರಿಯನ್ನು ಪುನ: ಆರಂಭಿಸಬೇಕು.”

**– ರಾಮನಗೌಡ ಅ ಬಿರಾದಾರ ಗ್ರಾಪಂ ಸದಸ್ಯರು, ಢವಳಗಿ.**

ತಾಲೂಕಿನ ಬಹುತೇಕ ಗ್ರಾಮದಲ್ಲಿ ಜೆಜೆಎಂ ಕಾಮಗಾರಿ ಪೂರ್ಣಗೊಂಡಿಲ್ಲ. ಮಾಡಿದ ಕಾಮಗಾರಿಗೆ ಬಳಸಿದ ಸಲಕರಣೆಗಳು ಗುಣಮಟ್ಟವನ್ನು ಕಳೆದುಕೊಂಡಿದೆ. ಅಧಿಕಾರಿಗಳ ಸಹಕಾರದಿಂದ ಗುತ್ತಿಗೆದಾರರು ಅತ್ಯಂತ ಕಳಪೆ ಮಟ್ಟದಲ್ಲಿ ಕಾಮಗಾರಿ ಮಾಡಿದ್ದಾರೆ, ಇದರಿಂದಾಗಿ ಸರಕಾರದ ಕೋಟ್ಯಂತರ ಅನುದಾನ ದುರ್ಬಳಕೆಯಾಗುತ್ತಿದೆ ಎಂಬುದು ಸಾರ್ವಜನಿಕರ ಆರೋಪ.

ಜೆಜೆಎಮ್ ಕಾಮಗಾರಿಗೆಗಾಗಿ ಶುದ್ಧವಾದ ಸಿಸಿ(ಕಾಂಕ್ರೆಟ್) ರಸ್ತೆಗಳನ್ನು ಹೊಡೆದು ಸಂಪೂರ್ಣ ನಾಶಪಡಿಸಿದ್ದಾರೆ. ಇದರಿಂದ ಸಾರ್ವಜನಿಕರಿಗೆ ಸಂಚರಿಸಲು ಸಂಚಕಾರವಾಗಿದೆ. ರಾತ್ರಿಹೊತ್ತಿನಲ್ಲಿ ವೃದ್ಧ–ರಿಗೆ ಮತ್ತು ಚಿಕ್ಕಮಕ್ಕಳಿಗೆ ಮನೆಯಿಂದ ಹೋರಬರಲು ತಮ್ಮ ಜೀವವನ್ನು ಕೈಯಲ್ಲಿ ಹಿಡಿದುಕೊಂಡು ಬರುವ ಪರಿಸ್ಥಿತಿ ಬಂದಿದೆ. ಬೈಕ್ ಸವಾರರಂತೂ ದಿನವಿಡಿ ಗುತ್ತಿಗೆದಾರರಿಗೆ ಹಿಡಿಶಾಪ ಹಾಕುತ್ತಿದ್ದಾರೆ. ಎಷ್ಟೋಸಲ ಬಿದ್ದು ಕೈಕಾಲು ಮುರಿದುಕೊಂಡ ಘಟನೆಗಳು ಕೂಡಾ ನಡೆದಿವೆ. ಇದರಿಂದ ಆಕ್ರೋಶಗೊಂಡ ಗ್ರಾಮಸ್ಥರು, ವಾಹನ ಸವಾರರು ಈ ಕಾಮಗಾರಿಗೆ ಮುಕ್ತಿಯಾದರೂ ಯಾವಾಗ? ಎಂದು ಪ್ರಶ್ನಿಸುತ್ತಿದ್ದಾರೆ.

“ನಿಮಗೆ ಶುದ್ಧ ನೀರು ದಿನದ ಇಪ್ಪತ್ನಾಲ್ಕು ತಾಸು ನಿಮ್ಮ ಮನೆಗೆ ಕೊಡತೆವಿ ಅಂತ ಗ್ರಾಮದಲ್ಲಿ ಶುದ್ಧ ಇದ್ದ ಸಿಸಿ ರಸ್ತೆ ಹೊಡೆದು ಆಳ ಮಾಡಿದ್ದಾರೆ. ಇಲ್ಲಿಯವರೆಗೆ ನಮಗೆ ಜೆಜೆಎಮ್ ನೀರಿನ ನಳ ಜೋಡಣೆಯು ಇಲ್ಲ, ಈ ಕಡೆ ಸಿಸಿ ರಸ್ತೆಯು ಆಳ ಆಗಿದೆ. ಅಧಿಕಾರಿಗಳು ಇಂತಹ ಗುತ್ತಿಗೆದಾರರ ವಿರುದ್ಧ ಶಿಸ್ತು ಕ್ರಮ ತೆಗೆದುಕೋಳ್ಳಬೇಕು.

**– ಆನಂದ ಮಠಪತಿ ಗ್ರಾಮಸ್ಥ**

**ಕಾಲುವೆ ಕೊನೆಯಂಚಿನವರೆಗೆ ನೀರು ತಲುಪಿಸಲು ಅಧಿಕಾರಿಗಳಿಗೆ ಡಿಸಿ ಟಿ.ಭೂಬಾಲನ್ ಸೂಚನೆ**

# ಕುಡಿವ ನೀರಿನ ಉದ್ದೇಶಕ್ಕಾಗಿ 1.8 ಟಿಎಂಸಿ ನೀರು ಬಿಡುಗಡೆ

**ಉದಯರಶ್ಮಿ ನ್ಯೂಸ್**

ವಿಜಂಌಪುರ: ಆಲಮಟ್ಟಿ ಜಲಾಶಯದಿಂದ ಫೆ.19ರಿಂದ ಮಾರ್ಚ 10ರವರೆಗೆ ಮುಳವಾಡ ಏತ ನೀರಾವರಿಯ ಹಾಗೂ ಚಿಮ್ಮಲಗಿ ಏತ ನೀರಾವರಿ ಕಾಲುವೆ ವ್ಯಾಪ್ತಿಯ 96 ಕೆರೆಗೆಳಿಗೆ 1.8 ಟಿಎಂಸಿ ನೀರು ಕುಡಿಯುವ ಉದ್ದೇಶಕ್ಕಾಗಿ ನೀರು ಹರಿಸಲಾಗುತ್ತಿದ್ದು, ಕೊನೆಯಂಚಿನವರೆಗೆ ಸಮರ್ಪಕವಾಗಿ ನೀರು ಹರಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚಿಸಿದರು.

ಸೋಮವಾರ ಜಿಲ್ಲಾಧಿಕಾರಿ ಕಚೇರಿಯ ಕೆಸ್ವಾನ್ ಕಚೇರಿಯಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ನೀರು ನಿರ್ವಹಣೆ ಸಭೆಯಲ್ಲಿ ಮಾತನಾಡಿದ ಅವರು, ಜನ–ಜಾನುವಾರುಗಳಿಗೆ ಕುಡಿಯುವ ಉದ್ದೇಶಕ್ಕಾಗಿ ನೀರು ಹರಿಸಲಾಗುತ್ತಿದ್ದು, ಅನ್ಯ ಉದೇಶಕ್ಕಾಗಿ ಬಳಸದೇ ಇರುವಂತೆ ನೋಡಿಕೊಂಡು ಕಾಲುವೆ ಜಾಲದ ವ್ಯಾಪ್ತಿಯಲ್ಲಿ ಬರುವ ಕೆರೆಗಳು ಪೂರ್ಣ ಭರ್ತಿಗೆ ಕ್ರಮವಹಿಸಬೇಕು ಎಂದು ಹೇಳಿದರು.





ಕಾಲುವೆಂಌ ವರ್ಾಗಗಳ ನಿರ್ವಹಣೆಯನ್ನು ಆಯಾ ತಾಲೂಕಿನ ತಹಶೀಲ್ದಾರ್‌ಗಳು ತಂಡಗಳನ್ನು ರಚಿಸಿಕೊಂಡು ನಿಗಾವಹಿಸಬೇಕು. ಪ್ರತಿ ಪಂಚಾಯತ್ ವ್ಯಾಪಿಯಲ್ಲಿ ಬರುವ ಹಳ್ಳಿಗಳಲ್ಲಿ ಕುಡಿಯುವ ನೀರಿನ ಉದ್ದೇಶಕ್ಕಾಗಿ ನೀರು ಹರಿಸಲಾಗಿದೆ. ಅನ್ಯ ಚಟುವಟಿಕೆಗಳಿಗೆ ಬಳಸದಂತೆ ಡಂಗೂರ ಸಾರಿಸಿ ಸಾರ್ವಜನಿಕರಿಗೆ ಮಾಹಿತಿ ಒದಗಿಸಬೇಕು. ಪಾಳಿಯಲ್ಲಿ ಸಿಬ್ಬಂದಿಗಳನ್ನು ನಿಯೋಜಿಸಿ ವಾಚ್ ಮತ್ತು ವಾರ್ಡ ಮಾಡಬೇಕು. ಇದಕ್ಕಾಗಿ ತಂಡ ರಚಿಸಿಕೊಂಡು ಕೊನೆಯಂಚಿನವರೆಗೆ ನೀರು ತಲುಪಿಸಲು ಸಂಬಂಧಿಸಿದ ಇಲಾಖೆಯವರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ವಿಜಯಪುರ ನಗರಕ್ಕೆ ಕುಡಿಯುವ ನೀರು ಪೂರೈಸಲು ಆದ್ಯತೆ ಮೇಲೆ ಭೂತನಾಳ ಕೆರೆ ತುಂಬಿಸಲು ಕ್ರಮ ವಹಿಸಬೇಕು ಎಂದು ಅವರು ಹೇಳಿದರು.

ನೀರು ಪೋಲಾಗದಂತೆ ಹಾಗೂ ಕೆರೆಯ ಕೊನೆ ಅಂಚಿಗೆ ನೀರು ತಲುಪುವಂತೆ ವಿಜಯಪುರ ಹಾಗೂ ಇಂಡಿ ವಿಭಾಗದ ಉಪ ವಿಭಾಗಧಿಕಾರಿಗಳು ಮೇಲುಸ್ತುವಾರಿ ನೋಡಿಕೊಳ್ಳಬೇಕು. ಪ್ರತಿ ದಿನದ ವರದಿಯನ್ನು ಚಿತ್ರ ಸಮೇತ ಜಿಲ್ಲಾಡಳಿತದ ಗಮನಕ್ಕೆ ತರಬೇಕು. ಒಟ್ಟು 96 ಕೆರೆಗಳಿಗೆ ನೀರಿನ ಅವಶ್ಯಕತೆ ಇದೆ. ಅವುಗಳನ್ನು ತುಂಬಿಸುವಲ್ಲಿ ಗ್ರಾಮ ಪಂಚಾಯತ್ ಅಧಿಕಾರಿ, ಸಣ್ಣ ನೀರಾವರಿ ಇಲಾಖೆ, ತಾಲೂಕು ಪಂಚಾಯತ್ ಇಓ, ಪೊಲೀಸ್ ಇಲಾಖೆಗಳು ಸಮನ್ವಯತೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಹೇಳಿದರು.

ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗಳು ಆಯಾ ಪ್ರದೇಶದ ಮಾಹಿತಿ ಹೊಂದಿರುವ ಹಿನ್ನಲೆಯಲ್ಲಿ ಸಮರ್ಪಕವಾಗಿ ಕಾರ್ಯ ನಿರ್ವಹಿಸುವಂತೆ ಸೂಚನೆ ನೀಡಬೇಕು. ಈ ಸಂದರ್ಭದಲ್ಲಿ ಯಾವುದೇ ಸಮಸ್ಯೆ ಉದ್ಭವವಾದರೆ ಜಿಲ್ಲಾಡಳಿತವನ್ನು ಸಂಪರ್ಕಿಸಬೇಕು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಋಷಿಕೇಶ್ ಸೋನಾವಣೆ, ಪ್ರೋಬೇಷನರ್ ಐಪಿಎಸ್ ಅಧಿಕಾರಿ ಶಾಲೂ, ಡಿವೈಎಸ್ಪಿ ಬಸವರಾಜ್ ಎಲಿಗಾರ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಂಕರ ಮಾರಿಹಾಳ, ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ, ವಿಜಯಪುರ ಉಪ ವಿಭಾಗಾಧಿಕಾರಿ ಶ್ವೇತಾ ಬೀಡಿಕರ, ಇಂಡಿ ಉಪ ಉಪವಿಭಾಗಾಧಿಕಾರಿ ಅಬೀದ್ ಗದ್ಯಾಳ ಸೇರಿದಂತೆ ವಿವಿಧ ತಾಲೂಕಿನ ತಹಶೀಲ್ದಾರ, ತಾಲೂಕಿನ ಕಾರ್ಯ ನಿರ್ವಹಣಾಧಿಕಾರಿಗಳು ಉಪಸ್ಥಿ–ರಿದ್ದರು. ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# 99 ಕೆರೆಗಳ ಭರ್ತಿಗೆ ನೀರು ಬಿಡುಗಡೆ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಜಿಲ್ಲೆಯ 99 ಕೆರೆಗಳ ಭರ್ತಿಗಾಗಿ ಸೋಮವಾರದಿಂದ ಆಲಮಟ್ಟಿ ಎಡದಂಡೆ ಕಾಲುವೆಯ ಮೂಲಕ ಚಿಮ್ಮಲಗಿ ಏತ ನೀರಾವರಿ ಯೋಜನೆಯ ಕಾಲುವೆಗೆ ಹಾಗೂ ಬಳೂತಿ ಜಾಕವೆಲ್ ಮೂಲಕ ಮುಳವಾಡ ಏತ ನೀರಾವರಿ ಯೋಜನೆಯ ಕಾಲುವೆಗಳಿಗೆ ನೀರು ಹರಿಸಲು ಆರಂಭಿಸಲಾಯಿತು.



ಆ ಕೆರೆಗಳ ಸಾಮರ್ಥ್ಯದ ಶೇ 50 ರಷ್ಟು ಕೆರೆಗಳನ್ನು ಭರ್ತಿ ಮಾಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸೂಪರಿಂಟೆಂಡಿಂಗ್ ಎಂಜಿನಿಯರ್ ಡಿ.ಬಸವರಾಜ ತಿಳಿಸಿದರು.

**ಕಟ್ಟುನಿಟ್ಟಿನ ಕ್ರಮ:**

ಕಾಲುವೆಗೆ ಹರಿಸುತ್ತಿರುವ ನೀರನ್ನು ಕಟ್ಟುನಿಟ್ಟಾಗಿ ಕೆರೆಗಳ ಭರ್ತಿಗೆ ನಾನಾ ಇಲಾಖೆಯವರು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು, ನಿತ್ಯವೂ ಕೆರೆಗಳ ಭರ್ತಿಯ ಬಗ್ಗೆ ಚಿತ್ರ ಸಮೇತ ವರದಿ ಸಲ್ಲಿಸಬೇಕು, ನೀರು ಯಾವುದೇ ಕಾರಣಕ್ಕೂ ಪೋಲಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು, ಬಿಸಲಿನ ಪ್ರಖರತೆ ಹೆಚ್ಚುತ್ತಿದ್ದು, ನೀರಿನ ಸಂಗ್ರಹ, ಬಳಕೆಯ ಬಗ್ಗೆ ಎಚ್ಚರದಿಂದ ಹೆಜ್ಜೆ ಇಡಬೇಕು ಎಂದು ಜಿಲ್ಲಾಧಿಕಾರಿಗಳು ಕಟ್ಟುನಿಟ್ಟಾಗಿ ಸೂಚಿಸಿದ್ದಾರೆ.

**99 ಕೆರೆಗಳು:**

ಕೆಲ ತಾಂತ್ರಿಕ ತೊಂದರೆ ಹಾಗೂ ಕೆರೆಗಳಿಗೆ ಸಂಪರ್ಕಿಸುವ ಕಾಲುವೆಯ ಜಾಲ ಇಲ್ಲದ್ದರಿಂದ ಮುಳವಾಡ ಏತ ನೀರಾವರಿ ಯೋಜನೆಯಡಿ ಒಂದು, ಚಿಮ್ಮಲಗಿ ಯೋಜನೆಯಡಿ ಏಳು ಕೆರೆಗಳನ್ನು ಭರ್ತಿ ಮಾಡುತ್ತಿಲ್ಲ, ಹೀಗಾಗಿ 107 ಕೆರೆಗಳಲ್ಲಿ ಕೇವಲ 99 ಕೆರೆಗಳ ಭರ್ತಿ ಮಾಡಲಾಗುತ್ತಿದೆ.

**1.8 ಟಿಎಂಸಿ ಅಡಿ ನೀರು:**

ಬೇಸಿಗೆಯಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕೆ ಸಂಗ್ರಹಿಸಿಡಲಾದ 5.5 ಟಿಎಂಸಿ ಅಡಿ ನೀರಿನ ಪೈಕಿ ಸದ್ಯ 1.8 ಟಿಎಂಸಿ ಅಡಿ ನೀರು ಬಳಕೆಗೆ ಬೆಳಗಾವಿ ಪ್ರಾದೇಶಿಕ ಆಯುಕ್ತರು ಅನುಮತಿ ನೀಡಿದ್ದಾರೆ.

ಆ ಪ್ರಕಾರ ನೀರು ಬಿಡಲು ಸಿದ್ಧತೆ ಮಾಡಿಕೊಳ್ಳಲಾಗಿದೆ, ಮೊದಲು ಕಾಲುವೆಯ ಕೊನೆ ಹಂತದ ಕೆರೆಗಳ ಭತರ್ಣಟಿಜಜಿಟಿಜಜ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ, ಆದರೆ ಯಾವುದೇ ಕಾರಣಕ್ಕೂ ಕೃಷಿ ಬಳಕೆಗೆ ಈ ನೀರು ಬಳಸುವಂತಿಲ್ಲ ಎಂದು ಅಣೆಕಟ್ಟು ವಲಯದ ಮುಖ್ಯ ಎಂಜಿನಿಯರ್ ಎಚ್.ಎನ್. ಶ್ರೀನಿವಾಸ ತಿಳಿಸಿದರು.

ನೀರು ಸದ್ಬಳಕೆಯ ಬಗ್ಗೆ ಪ್ರತಿನಿತ್ಯವೂ ವಿವಿಧ ಇಲಾಖೆಯ ಅಧಿಕಾರಿಗಳ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಮೇಲ್ವಿಚಾರಣೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ಫೆ.19 ರಿಂದ ಮಾ.10 ರವರೆಗೆ ನಾನಾ ಹಂತಗಳಲ್ಲಿ ನೀರು ಹರಿಯಲಿದೆ.

ಚಿಮ್ಮಲಗಿ ಏತ ನೀರಾವರಿ ಯೋಜನೆಯ ಪೂರ್ವ ಮತ್ತು ಪಶ್ಚಿಮ ವ್ಯಾಪ್ತಿಯ 34 ಕೆರೆಗಳ ಪೈಕಿ 27 ಹಾಗೂ ಮುಳವಾಡ ಪೂರ್ವ , ಪಶ್ಚಿಮ ಕಾಲುವೆ ಹಾಗೂ ಮುಳವಾಡ ಮೂರನೇ ಹಂತದ ಕಾಲುವೆ ವ್ಯಾಪ್ತಿಯ 73 ಕೆರೆಗಳ ಪೈಕಿ 72 ಕೆರೆಗಳಿಗೆ ನೀರು ಹರಿಸಲಾಗುತ್ತದೆ.

# ಕಾಲುವೆಗಳಿಗೆ ನೀರು :ನಿಷೇಧಾಜ್ಞೆ ಜಾರಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಆಲಮಟ್ಟಿ ಜಲಾಶಯದಿಂದ ಫೆ. 19ರಿಂದ ಮಾರ್ಚ 10ರವರೆಗೆ ಮುಳವಾಡ ಏತ ನೀರಾವರಿಯ ಹಾಗೂ ಚಿಮ್ಮಲಗಿ ಏತ ನೀರಾವರಿ ಕಾಲುವೆ ವ್ಯಾಪ್ತಿಯ 96 ಕೆರೆಗೆಳಿಗೆ 1.8 ಟಿಎಂಸಿ ನೀರು ಕುಡಿಯುವ ಉದ್ಧೇಶಕ್ಕಾಗಿ ನೀರು ಹರಿಸಲಾಗುತ್ತಿದ್ದು, ಈ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಕಾಲುವೆಗಳ ಎಡ–ಬಲ 100 ಅಡಿ ವ್ಯಾಪ್ತಿಯಲ್ಲಿ ಕಲಂ 144ರನ್ವಯ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿಗಳಾದ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಆದೇಶ ಹೊರಡಿಸಿದ್ದಾರೆ.

# ಕಬ್ಬಿನ ಗದ್ದೆಗೆ ಬೆಂಕಿ :ಅಪಾರ ಹಾನಿ



**ಉದಯರಶ್ಮಿ ನ್ಯೂಸ್**

ಚಿಮ್ಮಡ: ವಿದ್ಯುತ್ ತಂತಿಯಿಂದ ಹೊತ್ತಿದ ಕಿಡಿಗೆ ರೈತರೊಬ್ಬರ ಜಮೀನಿಗೆ ಬೆಂಕಿ ಹೊತ್ತಿಕೊಂಡ ಪರಿಣಾಮ ಲಕ್ಷಾಂತರ ರೂ.ಗಳ ಸ್ವತ್ತು ಹಾನಿಯಾದ ಘಟಣೆ ಚಿಮ್ಮಡ ಗ್ರಾಮದಲ್ಲಿ ಶನಿವಾರ ಸಂಭವಿಸಿದೆ.

ಗ್ರಾಮದ ಬನಹಟ್ಟಿ ಕೆರೆಗೆ ಹೊಂದಿಕೊಂಡಿರುವ ಪಿಕೆಪಿಎಸ್ ಮಾಜಿ ಅಧ್ಯಕ್ಷ ಬೀರಪ್ಪ ಗಡದಿಯವರ ಹೊಲದಲ್ಲಿ ಬೆಂಕಿ ಹೊತ್ತಿಕೊಂಡ ಪರಿಣಾಮ ಸುಮಾರು ಎರಡು ಎಕರೆಯಷ್ಟು ಕಬ್ಬಿನಗದ್ದೆ ಸುಟ್ಟು ಕರಕಲಾಗಿದೆ. ಅಲ್ಲದೇ ಸುಮಾರು ಒಂದು ಲಕ್ಷ ಮೌಲ್ಯದ ಹನಿ ನೀರಾವ–ರಿಗೆ ಬಳಸಲಾಗುವ ಸಾಮಗ್ರಿಗಳು ಸುಟ್ಟು ಹಾಳಾಗಿದ್ದು ಒಟ್ಟು ಸುಮಾರು ಎರಡುವರೆ ಲಕ್ಷ ಮೌಲ್ಯದ ಬೆಳೆ ಹಾಗೂ ಸಾಮಗ್ರಿಗಳು ಹಾಳಾಗಿವೆ ಎಂದು ಅಂದಾಜಿಸಲಾಗಿದೆ.

ಹೆಸ್ಕಾಂ, ಹಾಗೂ ಕಂದಾಯ ಇಲಾಖೆಗೆ ಈ ಕುರಿತು ಮಾಹಿತಿ ನೀಡಲಾಗಿದ್ದು ಗ್ರಾಮ ಆಡಳಿತ ಅಧಿಕಾರಿ ಮಂಜುನಾಥ ನೀಲನ್ನವರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಪ್ರೊ.ಸಾವಳಸಂಗರಿಗೆ ಶಿಕ್ಷಣ ರತ್ನ ಪ್ರಶಸ್ತಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಯಚೂರಿನ ಬೆಳಕು ಸಾಹಿತ್ಯ, ಶೈಕ್ಷಣಿಕ, ಸಾಂಸ್ಕೃತಿಕ ಟ್ರಸ್ಟ್ (ರಿ) ವತಿಯಿಂದ ಕೊಡುವ ಪ್ರಸಕ್ತ ಸಾಲಿನ "ರಾಷ್ಟ್ರಮಟ್ಟದ ಶಿಕ್ಷಣ ರತ್ನ" ಪ್ರಶಸ್ತಿಯನ್ನು ವಿಜಯಪುರದ ಪ್ರೊ. ಸಿದ್ದು ಸಾವಳಸಂಗ ಉಪನ್ಯಾಸಕರಿಗೆ ರವಿವಾರ ಫೆಬ್ರುವರಿ 18 ರಂದು ರಾಯಚೂರಿನ ಪಂ. ಸಿದ್ದರಾಮ ಜಂಬಲದಿನ್ನಿ ರಂಗಮಂದಿರದ "ಅಂತರ್ ರಾಜ್ಯ ಸಮ್ಮೇಳನ" ದಲ್ಲಿ ಸಂಸ್ಥಾಪಕ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡರ ಹಾಗೂ ಸಮ್ಮೇಳನದ ಅಧ್ಯಕ್ಷ ಡಾ. ದೇವೇಂದ್ರಮ್ಮ ಇವರು ಪ್ರದಾನ ಮಾಡಿದರು. ಬಾಲಿಕೆಯರ ಸರಕಾರಿ ಪದವಿ ಪೂರ್ವ ಕಾಲೇಜು, ವಿಜಯಪುರದಲ್ಲಿ ಹಿರಿಯ ಕನ್ನಡ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಸದರಿಯವರು ಶಿಕ್ಷಣಕ್ಕಾಗಿ ಸಲ್ಲಿಸಿದ ಅಮೋಘ ಸೇವೆಯನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ನೀಡಲಾಯಿತು.

### ನಾದ ಬಿಕೆ: ಲಕ್ಷ್ಮೀದೇವಿ ದೇಗುಲ ಮಹಾದ್ವಾರ ಉದ್ಘಾಟಿಸಿದ ಶಾಸಕ ಯಶವಂತ್ರಾಯಗೌಡ ಅಭಿಮತ

# ಯುವಕರಲ್ಲಿ ಸಂಸ್ಕಾರ–ಸಂಸ್ಕೃತಿ ಅಗತ್ಯ

**ಉದಯರಶ್ಮಿ ನ್ಯೂಸ್**

ಇಂಡಿ: ಯುವಕರು ಸಂಸ್ಕಾರ,ಸಂಸ್ಕೃತಿ ಅಳವಡಿಸಿಕೊಂಡರೆ ಜೀವನ ಸ್ವಾರ್ಥಕವಾಗುತ್ತದೆ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು.

ತಾಲೂಕಿನ ನಾದ ಬಿಕೆ ಗ್ರಾಮದಲ್ಲಿ ಶ್ರೀ ಲಕ್ಷ್ಮೀ ದೇವಿ ದೇವಸ್ಥಾನದ ಮಹಾದ್ವಾರ ಉದ್ಘಾಟಿಸಿ ಮಾತನಾಡುತ್ತಿದ್ದರು.

ಯುವಕನಿಗೆ ತನ್ನತನದಿಂದ ಬಿಡುಗಡೆ ಮಾಡುವುದು ಅವನಲ್ಲಿರುವ ಕಲೆ. ಜೀವನವನ್ನು ಯಜ್ಞದಂತೆ ನಡೆಸಬೇಕು. ನಾವು ಎಲ್ಲಿ ಎಲ್ಲಿರುತ್ತೇವೆ ಎನ್ನುವದು ಮುಖ್ಯವಲ್ಲ. ಯುವಕರು ನಮ್ಮ ಸಂಸ್ಕೃತಿಯನ್ನು ಹೇಗೆ ಆಚ–ರಿಸುತ್ತೇವೆ ಎನ್ನುವದು ಮುಖ್ಯ.

ಯುವಕರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಒಗ್ಗಟ್ಟಾಗಿ ಪಾಲ್ಗೊಳ್ಳಲು ಕೇಳಿಕೊಂಡರು. ಮತ್ತು ಗ್ರಾಮದಲ್ಲಿ ಇರುವ ಪಿಕೆಪಿ–ಎಸ್ ಉತ್ತಮವಾಗಿ ನಡೆಸಿಕೊಂಡು ಹೋಗಲು ಸಲಹೆ ನೀಡಿದರು.

ಗೋಳಸಾರದ ಅಭಿನವ ಪುಂಡಲಿಂಗ ಶ್ರೀಗಳು ಮಹಾಧ್ವಾರ ಉದ್ಘಾಟಿಸಿದರು.

ಸಾಲೋಟಗಿಯ ಶಿವಯೋಗಪ್ಪ ಜೋತಗೊಂಡ, ಮಲ್ಲನಗೌಡ ಬಿರಾದಾರ, ಆಲಮೇಲದ ಉಪನ್ಯಾಸಕ ಶಿವಾನಂದ ಉಪ್ಪಾರ, ಬಸವರಾಜ ಅವಧಿ, ಮಾತನಾಡಿದರು.

ವೇದಮೂರ್ತಿ ಚನ್ನಬಸವ ಶ್ರೀಗಳು, ಲಕ್ಷ್ಮೀ ದೇವಸ್ಥಾನ ಸಮಿತಿ ಅಧ್ಯಕ್ಷ ಶ್ರೀಶೈಲ ಅಳ್ಳಗಿ, ಉಪಾದ್ಯಕ್ಷ ಗಂಗಪ್ಪ ದ್ಯಾಮಗೊಂಡ, ಶಿವಗೊಂಡಪ್ಪ ಪಾಟೀಲ, ಶರಣಪ್ಪ ಮೂಲಿ, ಭೀಮರಾಯ ಪೂಜಾರಿ, ವಿಜಯಕುಮಾರ ಮಠಪತಿ, ಬಾಪುರಾಯ ಕಿವಟೆ, ಸೋಮು ಮ್ಯಾಕೇರಿ, ಮಹಾಂತೇಶ ಕೋಳಿ, ಶರಬಯ್ಯ ಮಠಪತಿ, ಚಿಚ್ಚೊಲ ಮೂಲಿ, ಮತ್ತಿತರಿದ್ದರು.

ಶ್ರೀ ಲಕ್ಷ್ಮೀ ದೇವರ ಪಲ್ಲಕ್ಕಿ ಹಾಗೂ ನಾದ ಕೆಡಿ ಕನ್ನಲಿಂಗೇಶ್ವರ ಪಲ್ಲಕ್ಕೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣೆಗೆ ನಡೆಯಿತು. ಕುಂಭ ಹೊತ್ತ ಮಹಿಳೆಯರು ಪಾಲ್ಗೊಂಡಿದ್ದರು.



# ಇತಿಹಾಸದಲ್ಲಿ ವಿಶೇಷ ಸ್ಥಾನ ಪಡೆದ ಶಿವಾಜಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯದ ವೀರಗಾಥೆಗಳು ಇತಿಹಾಸದ ಪುಟಗಳಲ್ಲಿ ಅಚ್ಚಳಿಯದೆ ಉಳಿದಿವೆ ಎಂದು ತಹಶೀಲ್ದಾರ ಪ್ರಕಾಶ ಸಿಂದಗಿ ಹೇಳಿದರು.

ಪಟ್ಟಣದ ತಹಶೀಲ್ದಾರ ಕಾರ್ಯಾಲಯದಲ್ಲಿ ಸೋಮವಾರ ಜಯಂತಿ ಅಂಗವಾಗಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.

ಶಿವಾಜಿ ಮಹಾರಾಜರು ಮರಾಠಾ ಸಾಮ್ರಾಜ್ಯದ ಸ್ಥಾಪಕರಾಗಿ ಜಾತ್ಯಾತೀತ ಆಡಳಿತ ನಡೆಸುವುದರ ಜೊತೆಗೆ ತಮ್ಮ ಅಪ್ರತಿಮ ಶೌರ್ಯ, ನೈಪುಣ್ಯತೆ, ಯುದ್ಧತಂತ್ರಗಳ ಮೂಲಕ ಭಾರತೀಯ ಇತಿಹಾಸದಲ್ಲಿ ವಿಶೇಷ ಸ್ಥಾನವನ್ನು ಪಡೆದಿದ್ದಾರೆ ಎಂದರು.

ಗ್ರೇಡ್ 2 ತಹಶೀಲ್ದಾರ ಶ್ಯಾಮ ರಾಠೋಡ, ಉಪತಹಶೀಲ್ದಾರ್ ಆರ್.ಪಿ.ಜೋಷಿ, ಶಿರಸ್ತೇದಾರ ಸುರೇಶ ಮ್ಯಾಗೇರಿ, ಸಾಯಿಕುಮಾರ ಬಿಸನಾಳ(ಕಡ್ಲೇವಾಡ ಪಿಸಿಎಚ್), ಸಂತೋಷ ತಳವಾರ, ನಾಗೇಂದ್ರ ಸಾವಜಿ, ಮಲ್ಲಪ್ಪ ಭತಗುಣಕಿ(ಅಗಸರ), ಈಶ್ವರ ಮಾಳದಕರ, ಅಂಕುಶ ಕುಳಗೇರಿ ಸೇರಿದಂತೆ ಸಿಬ್ಬಂದಿ ಇದ್ದರು.



# ಎರಡು ಲಕ್ಷರೂ ಇನ್ಸುರನ್ಸ್ ಚೆಕ್ ವಿತರಣೆ

**ಉದಯರಶ್ಮಿ ನ್ಯೂಸ್**

ಇಂಡಿ: ತಾಲೂಕಿನ ಮಾವಿನಹಳ್ಳಿ ಗ್ರಾಮದ ಬಿಸಿಮಿಲ್ಲಾ ಸೈಪನಸಾಬ ನದಾಫ ಇವರು ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಅಡಿಯಲ್ಲಿ ಪ್ರತಿ ವರ್ಷಕ್ಕೆ ರೂ 436 ರಂತೆ ಮೂರು ವರ್ಷಗಳ ವರೆಗೆ ವಿಮಾ ಪಾಲಸಿ ಕಂತು ಕಟ್ಟಿದ್ದರು.

ಅವರ ಸಹಜ ಸಾವಿನ ನಿಮಿತ್ಯ ಅವರ ಪತಿ ಸೈಪನಸಾಬ ಇವರಿಗೆ ಎರಡು ಲಕ್ಷ ರೂ ಚೆಕ್ಕನ್ನು ಎಸ್‌ಬಿಐ ಆವರಣದಲ್ಲಿ ಮ್ಯಾನೆಜರ್ ರಾಮಸ್ವಾಮಿಯವರು ವಿತರಣೆ ಮಾಡಿದರು.



ಎಸ್.ಬಿ.ಐ ಶಾಖಾ ಮುಖ್ಯ ಪ್ರಬಂಧಕ ಬಿ.ಜಿ.ರಾಮಸ್ವಾಮಿ ಮಾತನಾಡಿ, ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ ಅಡಿ ಪ್ರತಿ ವರ್ಷಕ್ಕೆ 436 ರೂ ಕಟ್ಟಿದರೆ ಅವರ ಸಹಜ ಅಥವಾ ಯಾವದೇ ತರಹದ ಸಾವು ಆದರೆ ಅವರ ನಾಮ ನಿರ್ದೇಶಕರಿಗೆ ಎರಡು ಲಕ್ಷ ಮತ್ತು ಪಿಎಮ್‌ಎಸ್‌ಬಿವೈ ಯೋಜನೆ ಅಡಿ ಪ್ರತಿ ವರ್ಷ ರೂ 20 ಕಟ್ಟಿದರೆ ಅಪಘಾತ ಉಂಟಾದರೆ ಅವರ ನಾಮ ನಿರ್ದೇಶಕ–ರಿಗೆ ಎರಡು ಲಕ್ಷ ರೂ ಮತ್ತು ಎರಡೂ ಇನ್ಸುರೆನ್ಸ ಮಾಡಿದರೆ ನಾಲ್ಕು ಲಕ್ಷ ರೂ ಬರುತ್ತದೆ ಎಂದರು.

ಮಹಾಂತೇಶ ಡೊಳ್ಳಿ, ಪರಶುರಾಮ ತೆನೆಹಳ್ಳಿ, ಎಫ್‌ಎಲ್‌ಸಿ ಭರತೇಶ ಉಪಾಧ್ಯ, ಮದರ ಸಂಸ್ಥೆಯ ಸಿಎಫ್–ಎಲ್ ಮಹಾದೇವಿ ಯರಗಟ್ಟಿ, ವತನ ಚವ್ಹಾಣ ಮತ್ತಿತರಿದ್ದರು. .

# ಚವನಭಾವಿ: ಮಕ್ಕಳ ಕಲಿಕೆ ಕುರಿತ ಪಾಲಕರ ಸಭೆ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಚಿಕ್ಕ ವಯಸ್ಸಿನಲ್ಲಿ ನಿಮ್ಮ ಮಕ್ಕಳಿಗೆ ವಿವಾಹ ಮಾಡಲು ಮುಂದಾಗದೇ ಶಿಕ್ಷಣ ಕೊಡಿಸಬೇಕು ಎಂದು ಅಂಗನವಾಡಿ ಮೇಲ್ವಿಚಾರಕಿ ಶಾರದಾ ಪೂಜಾರಿ ಹೇಳಿದರು.

ತಾಲೂಕಿನ ಚವನಭಾವಿ ಗ್ರಾಮದ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳ ಕಲಿಕೆಯ ಕುರಿತು ನಡೆದ ಪಾಲಕರ ಸಭೆಯಲ್ಲಿ ಅವರು ಮಾತನಾಡಿದರು.

ಸರ್ಕಾರ ಬಾಲ್ಯ ವಿವಾಹವನ್ನು ತಡೆಯಲು ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಅವುಗಳ ಪೈಕಿ ಉಚಿತ ಶಿಕ್ಷಣ ಪ್ರಮುಖವಾದದ್ದು. ಎಲ್ಲ ಮಕ್ಕಳಿಗೆ ಶಿಕ್ಷಣ ನೀಡಲು ಪಾಲಕರು ಮುಂದಾದಲ್ಲಿ ಸಾಕಷ್ಟು ಬದಲಾವಣೆಗಳನ್ನು ತರಬಹುದು. 3ರಿಂದ6 ವರ್ಷದೊಳಗಿನ ಮಕ್ಕಳನ್ನು ತಪ್ಪದೆ ಅಂಗನವಾಡಿ ಕೇಂದ್ರಕ್ಕೆ ಕಳುಹಿಸಲು ಮುಂದಾಗಬೇಕು ಎಂದರು.

ಈ ಸಂದರ್ಭದಲ್ಲಿ ಗ್ರಾಪಂ ಸದಸ್ಯ ಆಂಜನೇಯ ಪವಾರ, ಬಸಮ್ಮ ಪಾಟೀಲ, ಲಕ್ಷ್ಮೀಬಾಯಿ ಪೂಜಾರಿ, ಬಸಮ್ಮ ಹೆಜೆಕಾರ, ಕಾವೇರಿ ಚಲವಾದಿ, ಪವಿತ್ರಾ ದೊಡಮನಿ, ನಿರ್ಮಾಲಾ ಚಲವಾದಿ, ಲಕ್ಷ್ಮೀ ಚಲವಾದಿ, ದೇವಮ್ಮ ಚಲವಾದಿ, ಹುಲಗಮ್ಮ ಚಲವಾದಿ, ಅಂಗನವಾಡಿ ಕೇಂದ್ರ ಕಾರ್ಯಕರ್ತೆ ಇಂದಿರಾ ಕುಂಬಾರ, ಅಂಗನವಾಡಿ ಕೇಂದ್ರ ಸಹಾಯಕಿರಾದ ಗೌರಮ್ಮ ನಾಲತವಾಡ, ಶ್ಯಾಂಭವಿ ಪಾಟೀಲ, ಆಶಾ ಕಾರ್ಯಕರ್ತೆ ಶಿವಲೀಲಾ ಪತ್ತಾರ ಇದ್ದರು.

# ಆಲಮಟ್ಟಿ: ಮಂಜಪ್ಪ ಹರ್ಡೇಕರ ಜನ್ಮ ದಿನಾಚರಣೆ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಕರ್ನಾಟಕ ಗಾಂಧಿ ಮಂಜಪ್ಪ ಹರ್ಡೇಕರ, ವಚನಪಿತಾಮಹ ಫ.ಗು. ಹಳಕಟ್ಟಿ, ಬಂಥನಾಳ ಶಿವಯೋಗಿಗಳು ಈ ಮೂವರು ಜಿಲ್ಲೆಯ ಪಾಲಿಗೆ ಶೈಕ್ಷಣಿಕ ಹರಿಕಾರರು, ಈ ಅನರ್ಘ್ಯ ರತ್ನಗಳ ಕಾರ್ಯ ಚಿರಸ್ಥಾಯಿ ಎಂದು ವಚನಪಿತಾಮಹ ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ನಿರ್ದೇಶಕ ಪ್ರೊ ಜಿ.ಎಸ್. ಮದಭಾವಿ ಅಭಿಪ್ರಾಯಪಟ್ಟರು.

ಇಲ್ಲಿಯ ಕರ್ನಾಟಕ ಗಾಂಧಿ ಮಂಜಪ್ಪ ಹರ್ಡೇಕರ ಸ್ಮಾರಕದಲ್ಲಿ ಭಾನುವಾರ ಮಂಜಪ್ಪನವರ ಕಂಚಿನಪುತ್ಥಳಿಗೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಅವರು ಯಾವುದೇ ಮಠ ಮಾನ್ಯಗಳನ್ನು ಕಟ್ಟದೇ ಜನರಲ್ಲಿ ಶೈಕ್ಷಣಿಕ ಜಾಗೃತಿ, ವೈಚಾರಿಕ ಪ್ರಜ್ಞೆ, ಖಾದಿ ಬಳಕೆ, ಸ್ವ ಉದ್ಯೋಗ ಹೆಚ್ಚಿಸಲು ನೆರವಾದರು ಎಂದರು.



1923 ರ ಕಾಲಘಟ್ಟದಲ್ಲಿಯೇ ಆಲಮಟ್ಟಿಯಲ್ಲಿ ಕಾಯಕ ತತ್ವದಡಿ ಶಾಲೆ ಸ್ಥಾಪಿಸಿ ಈ ಭಾಗದಲ್ಲಿ ಶೈಕ್ಷಣಿಕ ವಾತಾವರಣ ನಿರ್ಮಿಸಿ ನಾನಾ ವಿಧವಾದ ಪತ್ರಿಕೆಯನ್ನು ಆರಂಭಿಸಿ, ಖಾದಿವಾದವನ್ನು ಪ್ರಚುರಗೊಳಿಸಿದವರು ಮಂಜಪ್ಪನವರು ಎಂದರು.

ಮಂಜಪ್ಪನವರ ಹಲವು ಕೃತಿಗಳು, ಅವರ ಮೂಲಕೃತಿಗಳನ್ನು ಹಳಕಟ್ಟಿ ಸಂಶೋಧನಾ ಕೇಂದ್ರದಲ್ಲಿಡಲಾಗಿದೆ ಎಂದರು.

ಮಂಜಪ್ಪ ಹರ್ಡೇಕರ ಸ್ಮಾರಕದ ಕಾರ್ಯದರ್ಶಿ ವಿ.ಎಂ. ಪಟ್ಟಣಶೆಟ್ಟಿ ಮಾತನಾಡಿ , ಈ ಬಾರಿ ಮಂಜಪ್ಪ ಹರ್ಡೇಕರ ಅವರು ಜನಿಸಿದ ಬನವಾಸಿಯಲ್ಲಿಯೂ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದರು.

ಪ್ರತಿಭಾ ಪುರಸ್ಕಾರ: ಮಂಜಪ್ಪ ಹರ್ಡೇಕರ ಅವರ ಮೊಮ್ಮಗ ನೀಡಿದ ಹಣದಲ್ಲಿ ಕಳೆದ ವರ್ಷ ನಾನಾ ಪರೀಕ್ಷೆಯಲ್ಲಿ ಸಾಧನೆಗೈದ ಮಕ್ಕಳಿಗೆ ನಗದು ಪುರಸ್ಕಾರ ನೀಡಿ ಗೌರವಿಸಲಾಯಿತು.

ಮೆರವಣಿಗೆ: ಕಾರ್ಯಕ್ರಮಕ್ಕೂ ಮೊದಲು ಮಂಜಪ್ಪನವರ ಭಾವಚಿತ್ರದ ಮೆರವಣಿಗೆ ರಾಮಲಿಂಗೇಶ್ವರ ದೇವಸ್ಥಾನದಿಂದ ಸ್ಮಾರಕದವರೆಗೆ ಜರುಗಿತು.

ಕೀಲುಗೊಂಬೆಯಾಟ, ಡೊಳ್ಳುಗಳ ನಿನಾದ, ವಿದ್ಯಾರ್ಥಿಗಳ ಡ್ರಮ್ಸೆಟ್ ವಾದನ ಗಮನಸೆಳೆಯಿತು.

ಕಾರ್ಯಕ್ರಮದಲ್ಲಿ ಜಿ.ಎಂ. ಕೊಟ್ಯಾಳ, ಎಸ್. ಐ. ಗಿಡ್ಡಪ್ಪಗೋಳ, ಗಂಗಾಧರ ಹಿರೇಮಠ, ಎಂ.ಎಚ್. ಬಳಬಟ್ಟಿ, ಎಸ್.ಐ. ಹರಣಶಿಕಾರಿ, ಬಿ.ಎಚ್. ಗುಣದಾಳ, ನೀಲಾಂಬಿಕಾ ಪಾಟೀಲ, ಸಂಗಮೇಶ ಚೆನ್ನಗಾವಿ, ಮುತ್ತು ಕಿರಸೂರ, ಅಶೋಕ ಲಮಾಣಿ, ಅಯ್ಯಪ್ಪಗೌಡ ಪಾಟೀಲ, ವಸಂತ ಬಡಿಗೇರ, ಸಂತೋಷ ಗಾಣಿಗೇರ, ಮಹ್ಮದ್ ಯೂಸೂಫ್, ಡಾ ಲೀಲಾ ಹೂಗಾರ, ನೀಲಮ್ಮ ಸೂರ್ಯವಂಶಿ, ದಾನಮ್ಮ ಚಿನಿವಾಲ, ಡಾ ಸವಿತಾ ಪಾಟೀಲ, ದೇವರಾಜ, ಕಲ್ಪನಾ ಹಿರೇಮಠ ಸೇರಿದಂತೆ ಹಳೇ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಬಸವೇಶ್ವರ ದೇವಸ್ಥಾನ ಹುಂಡಿಯಲ್ಲಿ ರೂ.8.53 ಲಕ್ಷ ಹಣ ಸಂಗ್ರಹ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಪಟ್ಟಣದ ಐತಿಹಾಸಿಕ ಮೂಲನಂದೀಶ್ವರ (ಬಸವೇಶ್ವರ) ದೇವಸ್ಥಾನದ ಹುಂಡಿಂ–ಯನ್ನು ಶನಿವಾರ ಕೂಡಲಸಂಗಮ ಅಭಿವೃದ್ಧಿ ಮಂಡಳಿಯ ಆಯುಕ್ತ ಬಸಪ್ಪ ಪೂಜಾರಿ ಸಮ್ಮುಖದಲ್ಲಿ ಸಿಬ್ಬಂದಿಗಳು ತೆಗೆದರು. ನಂತರ ದಾಸೋಹ ಭವನದಲ್ಲಿ ಎಣಿಕೆ ಕಾರ್ಯ ಜರುಗಿತು. ಇಂದು ರೂ.8,53,530 ಹಣ ಸಂಗ್ರಹವಾದರೆ, 3 ಗ್ರಾಂ, 500 ಮಿಲಿ ಬಂಗಾರ, 299 ಗ್ರಾಂ,540 ಮಿಲಿ ಬೆಳ್ಳಿ ಸಂಗ್ರಹವಾಗಿದೆ. ಕಳೆದ 2023 ರ ಸೆ.27 ರಂದು ಹುಂಡಿಯಿಂದ ರೂ.6,91,233 ಸಂಗ್ರಹವಾಗಿತ್ತು. ಕಳೆದ ಬಾರಿಗಿಂತಲೂ ರೂ.1.50 ಲಕ್ಷಕ್ಕಿಂತಲೂ ಹೆಚ್ಚು ಹಣ ಸಂಗ್ರಹವಾಗಿದೆ.

ಎಣಿಕೆ ಕಾರ್ಯ ಸಂದರ್ಭದಲ್ಲಿ ಕೂಡಲಸಂಗಮ ಅಭಿವೃದ್ಧಿ ಮಂಡಳಿ ಆಯುಕ್ತ ಬಸಪ್ಪ ಪೂಜಾರಿ, ಗ್ರೇಡ್–2 ಪ್ರಭಾರಿ ತಹಸೀಲ್ದಾರ ಜೆ.ಎಸ್.ಚಿನಿವಾಲರ, ಲೆಕ್ಕ ಅಧಿಕ್ಷಕ ಬಿ.ಎಸ್.ಕಳ್ಳಿ, ಮುಖಂಡರಾದ ಬಸವರಾಜ ಹಾರಿವಾಳ, ಶೇಖರ ಗೊಳಸಂಗಿ, ಶೇಖರಗೌಡ ಪಾಟೀಲ, ಶಾಂತಪ್ಪ ಪಟ್ಟಣಶೆಟ್ಟಿ, ದೇವಸ್ಥಾನದ ಸಿಬ್ಬಂದಿಗಳಾದ ಎ.ಎಂ.ಸಿಂದಗಿ, ಉಮಾ, ಡಿ.ಎಸ್.ಹಿರೇಮಠ, ಸುರೇಶ ಪಡಶೆಟ್ಟಿ, ದೇವಸ್ಥಾನದ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯ ವೈ.ಎನ್.ಮಿಣ–ಜಗಿ, ಎಸ್.ಎಸ್.ಹಡಪದ, ಬಿ.ಎಸ್.ನಂದಿಹಾಳ, ಎಸ್. ಎಸ್.ನಂದ್ಯೆಗೋಳ, ಭಾರತೀಯ ಸ್ಟೇಟ್ ಬ್ಯಾಂಕಿನ ಸಿಬ್ಬಂದಿಗಳಾದ ಮೋಹನ ಭೂತನಾಳ, ಬಿ.ಎಂ.ಬೂಯ್ಯಾರ ಇತರರು ಇದ್ದರು.

ಪ್ರತಿ ಸಲ ಹುಂಡಿ ಎಣಿಕೆ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಿಂದ ಒಬ್ಬರು ಪೊಲೀಸ್ ಸಿಬ್ಬಂದಿ ಹಾಜರ್ ಇರುತ್ತಿದ್ದರು. ಈ ಸಲ ಯಾವ ಪೊಲೀಸ್ ಸಿಬ್ಬಂದಿ ಕಂಡುಬರಲಿಲ್ಲ.

ಛತ್ರಪತಿ ಶಿವಾಜಿ ಜಯಂತಿ ಆಚರಣೆ | ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಅಭಿಮತ

# ಶಿವಾಜಿ ಮಹಾರಾಜರ ಜೀವನ ಯುವಕರಿಗೆ ಮಾದರಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಛತ್ರಪತಿ ಶಿವಾಜಿಯ ಶೌರ್ಯ, ಸಾಹಸ, ರಾಷ್ಟ್ರಭಕ್ತಿ ಹಾಗೂ ಅವರ ಆದರ್ಶ ಅರಿತುಕೊಳ್ಳುವುದರ ಜೊತೆಗೆ, ಅವರ ಜೀವನ ಮೌಲ್ಯಗಳು ಮುಂದಿನ ಜನಾಂಗಕ್ಕೆ ತಿಳಿಸಬೇಕು. ಅವರ ಜೀವನಾದರ್ಶ ಇಂದಿನ ಯುವಕರು ಮಾದರಿಯಾಗಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ ಹೇಳಿದರು.

ಸೋಮವಾರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಂಡ ಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.



ಛತ್ರಪತಿ ಶಿವಾಜಿಯ ದೈರ್ಯ, ಸಾಹಸದ ಚರಿತ್ರೆ, ಕತೆಗಳನ್ನು ಇಂದಿನ ಮಕ್ಕಳಿಗೆ ತಿಳಿಹೇಳಬೇಕು. ಈ ಮೂಲಕ ಮಕ್ಕಳಲ್ಲಿ ದೇಶಾಭಿಮಾನವನ್ನು ಬೆಳಸಬೇಕು. ಅವರ ಅಪಾರ ಸ್ವಾಭಿಮಾನ, ಮಹಿಳೆಯರ ಬಗ್ಗೆ ಗೌರವ ಇಟ್ಟುಕೊಂಡ ಶಿವಾಜಿಯುವರ ಆದರ್ಶವನ್ನು ನಾವು ಯಾವತ್ತೂ ಪಾಲಿಸಬೇಕು. ವಿಜಯಪುರಕ್ಕೂ ಶಿವಾಜಿ ಅವರಿಗೂ ಅವಿನಾಭಾವ ಸಂಬಂಧ ಇದೆ ಎಂದು ಹೇಳಿದರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಶಿಕ್ಷಣ ಅಧ್ಯಯನ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ. ವಿಷ್ಣು ಶಿಂಧೆ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆಯ ಮೇಯರ್ ಮಹೇಜಬಿನ ಹೊರ್ತಿ, ಜಿಲ್ಲಾ ಪಂಚಾಯತಿಯ ಉಪ

### ಮೆರವಣಿಗೆಗೆ ಚಾಲನೆ

ಶಿವಾಜಿ ವೃತ್ತದಲ್ಲಿ ಛತ್ರಪತಿ ಶಿವಾಜಿ ಅವರ ಭಾವಚಿತ್ರದ ಮೆರವಣಿಗೆಗೆ ಉಪ ಮೇಯರ್, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ರಿಷಿ ಆನಂದ ಅವರು ಚಾಲನೆ ನೀಡಿದರು.

# ಪೊಲೀಸ್ ಕಾನ್ಸಟೇಬಲ್ ಹುದ್ದೆಗೆ ಪರೀಕ್ಷಾ ಪೂರ್ವ ತರಬೇತಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಸ್ಟಡಿ ಸರ್ಕಲ್ ಕಾರ್ಯಕ್ರಮದ ಅಡಿಯಲ್ಲಿ ಮುಂಬರುವ ಪೊಲೀಸ್ ಕಾನ್ಸಟೇಬಲ್ ಹುದ್ದೆಗೆ ನಡೆಯುವ ಸ್ಪರ್ಧಾತ್ಮಕ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಪರೀಕ್ಷಾ ಪೂರ್ವ ತರಬೇತಿ ಆಯೋಜಿಸಲಾಗಿದೆ.

ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳಿಗೆ ಫೆ.26 ರಿಂದ ಮಾರ್ಚ್ 07ರವರೆಗೆ ಸ್ಪರ್ಧಾತ್ಮಕ ಪರೀಕ್ಷೆಯ ಪಠ್ಯಕ್ರಮನುಸಾರವಾಗಿ ವಿಜಯಪುರ ನಗರದ ಮಿನಾಕ್ಷಿ ಚೌಕ್‌ನಲ್ಲಿರುವ ನಾಗಪಾಲ ಬಿಲ್ಡಿಂಗ್, ಸೌರಭ ಫಾರ್ಮಾ ಎದುರಿಗೆ, ಇಜೇರಿ ಕ–ರಿಯರ್ ಅಕಾಡೆಮಿಯಲ್ಲಿ ಉಚಿತ ತರಬೇತಿ ಆಯೋಜಿಸಲಾಗಿದೆ.

ತರಬೇತಿಗೆ ಹಾಜರಾಗಲಿಚ್ಛಿಸುವ ಅಭ್ಯರ್ಥಿಗಳು ಕೆಎಸ್‌ಪಿನಲ್ಲಿ ಅಧಿಸೂಚಿತ ಕಾನ್ಸಟೇಬಲ್ ಹುದ್ದೆಗೆ ಸಲ್ಲಿಸಿರುವ ತಮ್ಮ ಅರ್ಜಿಯ ಝುರಾಕ್ಸ್ ಪ್ರತಿ ಹಾಗೂ ಆಧಾರ ಕಾರ್ಡ ಝುರಾಕ್ಸೊಮದಿಗೆ ದಿನಾಂಕ: 26–02–2024ರೊಳಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಖುದ್ದಾಗಿ ಅಥ ವಾ ಕಚೇರಿಯ empbjp@gmail.com ಇಮೇಲ್ ಮೂಲಕ ನೊಂದಾಯಿಸಿಕೊಳ್ಳಬಹುದಾಗಿದೆ.

ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಸ್ಟೇಶನ ರಸ್ತೆ, ವಿಜಯಪುರ ಅಥವಾ ದೂರವಾಣಿ : 08352–250383, ಮೊ: 9071055557, 9341777757 ಸಂಖ್ಯೆಗೆ ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಕೇರಿ: ವಿಜ್ರಂಭಣೆಯ ಸಂವಿಧಾನ ಜಾಗೃತಿ ಜಾಥಾ

**ಉದಯರಶ್ಮಿ ನ್ಯೂಸ್**

ಕಲಕೇರಿ: ಜಿಲ್ಲಾ ಪಂಚಾಯತ ವಿಜಯಪುರ, ತಾಲೂಕ ಪಂಚಾಯತ ತಾಳಿಕೋಟಿ ಅವರ ನಿರ್ದೇಶನದೊಂದಿಗೆ ಕಲಕೇರಿ ಗ್ರಾಮ ಪಂಚಾಯುತ ನೇತೃತ್ವದಲ್ಲಿ ಗ್ರಾಮದ ವಿವಿಧ ಪ್ರಗತಿಪರ ಸಂಘಟನೆಗಳು ಮತ್ತು ವಿವಿಧ ಶಾಲಾ ಕಾಲೇಜುಗಳ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಬೃಹತ್ ಮೆರವಣಿಗೆಯೊಂದಿಗೆ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು.

ಭಾರತ ರತ್ನ ಡಾ ಬಿ ಆರ್ ಅಂಬೇಡ್ಕರ್ ಅವರ ರಥ ಹುಣಶ್ಯಾಳ ಮಾರ್ಗವಾಗಿ ಕಲಕೇರಿ ಗ್ರಾಮವನ್ನು ಪ್ರವೇಶಿಸುತ್ತಿದ್ದಂತೆಯೇ ಮಾಲಾರ್ಪಣೆ ಮಾಡಿ ಅದ್ದೂರಿಯಿಂದ ಸ್ವಾಗತಿಸಿ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ತಾಳಿಕೋಟಿ ತಹಶೀಲ್ದಾರ ಕೀರ್ತಿ ಚಾಲಕ ಅವರ ನೇತೃತ್ವದಲ್ಲಿ ಪುಷ್ಪಮಾಲೆಯನ್ನು ಹಾಕುವ ಮೂಲಕ ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳ ವಿವಿಧ ವೇಷಭೂಷಣಗಳೊಂದಿಗೆ ಘೋಷಣೆಗಳನ್ನು ಕೂಗುತ್ತಾ ಗ್ರಾಮದ ದಿ.ತಂಗಮ್ಮ ದೇಸಾಯಿ ಕಲ್ಯಾಣ ಮಂಟಪದ ಪಕ್ಕದ ರಸ್ತೆಯಿಂದ ಗ್ರಾಮದ ಪ್ರಮುಖ ರಸ್ತೆಗಳ ಮೂಲಕ ಸಾಗಿದ ಮೆರವಣಿಗೆಯುದ್ದಕ್ಕೂ ನಮ್ಮ ಸಂವಿಧಾನ ನಮ್ಮ ಹೆಮ್ಮೆ ಎಂಬ ಕೂಗು ಕೇಳಿಬಂದಿತು.

ಗುರುಮಡಿವಾಳೇಶ್ವರ ದೇವಸ್ಥಾನದ ಆವರಣದಲ್ಲಿ ಜರುಗಿದ ಕಾರ್ಯಕ್ರಮದ ಪ್ರಾರಂಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಉಮೇಶ ಲಮಾಣಿ ಅವರು ಸಂವಿಧಾನ ಪೀಠಿಕೆಯ ಪ್ರಮಾಣ ವಚನ ಬೋಧಿಸಿದರು.

ನಂತರ ಮಾತನಾಡಿದ ಉಪನ್ಯಾಸಕ ಬಸವರಾಜ ಕುಂಬಾರ ಅವರು, ದೇಶದ ಸ್ವಾತಂ□□□□□□ ನಂತರ ಅವಶ್ಯವಾಗಿರುವ ಎಲ್ಲ ಕಾನೂನು ಹಕ್ಕು ಮತ್ತು ಕರ್ತವ್ಯಗಳನ್ನು ಒಳಗೊಂಡ ಸಂವಿಧಾನ ಹೃದಯ ಮತ್ತು ತಾಯಿ ಇದ್ದಂತೆ ಎಂದರು,



ಕಾರ್ಯಕ್ರಮಕ್ಕೆ ಮುನ್ನ ಶಿಕ್ಷಕರಾದ ಶಿವಾನಂದ ಹರಿಜನ ಅವರು ಡಾ. ಬಿ.ಆರ್.ಅಂಬೇಡ್ಕರ್ ಕುರಿತಂತೆ ವಿಶೇಷ ಪ್ರಾರ್ಥನೆಗೀತೆ ಹಾಡಿದರು. ನಂತರ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಭಾವಚಿತ್ರ ಮತ್ತು ಸಂವಿಧಾನ ಪೀಠಿಕೆಗೆ ಪುಷ್ಪಾರ್ಚನೆ ಮಾಡಲಾಯಿತು. ಈ ವೇಳೆ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಡಾ.ಅಂಬೇಡ್ಕರ್ ಸೇರಿದಂತೆ ಅನೇಕ ಮಹನೀಯರ ಕುರಿತು ವೇಷ ಭೂಷಣ ರೂಪಕಗಳನ್ನು ಪ್ರದರ್ಶಿಸಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಗ್ರಾಪಂ ಅಧ್ಯಕ್ಷ ರಾಜಅಹ್ಮದ್ ಸಿರಸಗಿ, ಉಪಾಧ್ಯಕ್ಷರ ಪ್ರತಿನಿಧಿ ಪರಶುರಾಮ ಬೇಡರ, ತಾಲೂಕ ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್.ಬಿರಾದಾರ, ನೋಡಲ್ ಅಧಿಕಾರಿ ಶಿವರಾಜ ನಾಯಕ, ಸಮಾಜ ಕಲ್ಯಾಣ ಇಲಾಖೆಯ ಉಮೇಶ ಲಮಾಣಿ, ಪಿಡಿಓ ಬಸನಗೌಡ ಚಾಧರಿ, ಇಸಿಓ ಐ.ಎಫ್.ಬಾಲ್ಕಿ, ಪಿಎಸ್ಐ ರೋಹಿಣಿ ಪಾಟೀಲ, ಮಾಜಿ ತಾಪಂ ಸದಸ್ಯ ಲಕ್ಕಪ್ಪ ಬಡಿಗೇರ, ಡಿಎಸ್‌ಎಸ್ ತಾಲೂಕ ಸಂಚಾಲಕರಾದ ಶ್ರೀಶೈಲ ಜಾಲವಾದಿ, ಸಿಆರ್‌ಪಿ ಶ್ರೀಶೈಲ ನಾಯ್ಕೋಡಿ, ಗ್ರಾಮಲೆಕ್ಕಾಧಿಕಾರಿ ಈರಣ್ಣ ಪತ್ತಾರ, ಶಿವು ಹೊಸಮನಿ ಸೇರಿದಂತೆ ಗ್ರಾಪಂ ಸದಸ್ಯರು, ವಿವಿಧ ಇಲಾಖೆಯ ಅಧಿಕಾರಿಗಳು, ಮುಖಂಡರಿದ್ದರು.

# ಬಿಜೆಪಿ ಪದಾಧಿಕಾರಿಗಳ ಆಯ್ಕೆ







**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಭಾರತೀಯ ಜನತಾ ಪಕ್ಷದ ನೂತನ ಜಿಲ್ಲಾ ಉಪಾಧ್ಯಕ್ಷರಾಗಿ ಎಂ.ಡಿ.ಕುಂಬಾರ ವಕೀಲರು, ಜಿಲ್ಲಾ ಕಾರ್ಯದರ್ಶಿಯಾಗಿ ಸಿದ್ದು ಹೆಬ್ಬಾಳ ಮತ್ತು ತಾಲೂಕು ಮಂಡಲ ಅಧ್ಯಕ್ಷರನ್ನಾಗಿ ಜಗದೀಶ ಪಂಪಣ್ಣವರ ಅವರನ್ನು ಆಯ್ಕೆ ಮಾಡಿ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ ಆದೇಶಿಸಿದ್ದಾರೆ.

ವ್ಯಕ್ತಿ – ವ್ಯಕ್ತಿತ್ವ

# ಡಾ.ಗೌತಮ್ ಆರ್. ಚೌಧರಿ

## ಮಾನವೀಯ ಕಳಕಳಿಯ ಸಹೃದಯಿ

**ಉದಯರಶ್ಮಿ ನ್ಯೂಸ್**

ಇವರು ವೃತ್ತಿಯಲ್ಲಿ ವೈದ್ಯರು, ಪ್ರವೃತ್ತಿಯಲ್ಲಿ ಸಮಾಜ ಸೇವಕರು. ಅದಕ್ಕಾಗಿ ಆರಿಸಿಕೊಂಡ ಮಾರ್ಗ ರಾಜ–ಕಾರಣ. ರಾಜಕಾರಣಕ್ಕೆ ಬರುವವರು ಹಣ ಮಾಡಲು ಎಂಬ ಅಪವಾದಕ್ಕೆ



ವಿರುದ್ಧವಾಗಿ ತಾವು ಕಷ್ಟಪಟ್ಟು ದುಡಿದ ಅಪಾರ ಹಣವನ್ನು ಸಮಾಜಸೇವೆಗೆ ಸುರಿದವರಿವರು. ಇಂತಹ ಅಪರೂಪದ ವ್ಯಕ್ತಿತ್ವ ಹೊಂದಿದವರು ಡಾ.ಗೌತಮ್ ಆರ್ ಚೌಧರಿ ಅವರು.

"ವೈದ್ಯೋ ನಾರಾಯಣ ಹರಿ" ಉಕ್ತಿಗೆ ಬದಲು ಬಡ ರೋಗಿಗಳಲ್ಲೇ ದೇವರನ್ನು ಕಾಣುವ ಸಹೃದಯಿ ಇವರು. ವಿಜಯಪುರ ಜಿಲ್ಲೆಯ ಕಡುಬಡತನದ ಅನೇಕ ರೋಗಿಗಳನ್ನು ತಮ್ಮ ಸ್ವಂತ ವೆಚ್ಚದಲ್ಲಿ ಬೆಂಗಳೂರಿಗೆ ಕರೆದೊಯ್ದು ಅವರಿಗೆ ಅಗತ್ಯವಿದ್ದ ಲಕ್ಷಾಂತರ ರೂ. ವೆಚ್ಚದ ಶಸ್ತ್ರಚಿಕಿತ್ಸೆಗಳನ್ನು ಸಂಪೂರ್ಣ ಉಚಿತವಾಗಿ ನೆರವೇರಿಸಿ ಆ ಕುಟುಂಬಗಳ ಬಾಳಿಗೆ ಬೆಳಕಾದ ಇವರು ಪ್ರಚಾರದಿಂದ ಗಾವುದ ದೂರವಿರುವವರು. ವೈದ್ಯಕೀಯ ರಂಗದಲ್ಲಿ ಇವರ ಇಂತಹ ಸಮರ್ಪಣಾ ಭಾವದ ಸೇವೆಯನ್ನು ಗುರುತಿಸಿಯೇ ಇತ್ತೀಚೆಗೆ ನಾಡಿನ ಖ್ಯಾತ ದಿನಪತ್ರಿಕೆ "ವಿಜಯ ಕರ್ನಾಟಕ" ಪತ್ರಿಕೆ ಬಳಗವು ಇತ್ತೀಚೆಗೆ ಇವರಿಗೆ ಬೆಂಗಳೂರಿನಲ್ಲಿ "ಹೆಲ್ತ್ ಎಕ್ಸಲೆನ್ಸ್ 2024" ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದೆ.

ವ್ಂಊಲತ್ಃ ಸಿಂದ್ಗಿ ತಾಲೂಕಿನವರಾದ ಇವರು ಜನಿಸಿದ್ದು ವಿಜಯಪುರದ ರಾಜಕಾರಣ ಹಿನ್ನೆಲೆಯ ಪ್ರತಿಷ್ಠಿತ ಚೌಧರಿ ಮನೆತನದಲ್ಲಿ. ಹೀಗಾಗಿ ಸಹಜವಾಗಿಯೇ ಇವರಿಗೆ ದೀನದಲಿತರೆಂದರೆ ಕಾಳಜಿ ಮಾಡುವ ಸ್ವಭಾವ ರಕ್ತದಲ್ಲೇ ಇತ್ತು. ಜೊತೆಗೆ ಓದಿದ್ದು, ವೃತ್ತಿಯಾಗಿ ಕೈಗೊ0ಡಿದ್ದು ವೈದ್ಯಕೀಯವನ್ನು. ಇದು 'ಜನಸೇವೆಯೇ ಜನಾರ್ದನ ಸೇವೆ' ಎಂಬ ಮಾತನ್ನು ಅಕ್ಷರಶಃ ಜೀವನದ ಧ್ಯೇಯವಾಗಿಸಲು ಶಕ್ತಿ ನೀಡಿತು. ಸೇವಾ ಮನೋಭಾವದ ರಾಜಕಾರಣಿಯಲ್ಲಿ ವೈದ್ಯಕೀಯ ಪ್ರಾವೀಣ್ಯ ಮೇಳೈಸಿರುವ ಅಪರೂಪದ ಉದಾಹರಣೆ ಇವರ ವ್ಯಕ್ತಿತ್ವ. ಆದ್ದರಿಂದ ಜನರಿಗೆ ಇವರೆಂದರೆ ಸಹಜ ಗೌರವ.

ಡಾ.ಗೌತಮ್ ಆರ್.ಚೌಧರಿ ಅವರಿಗೆ ಸದಾ ಸಮಾಜದ ಸ್ವಾಸ್ಥ್ಯದ ಮೇಲೆ ಕಾಳಜಿ. ಹೀಗಾಗಿಯೇ ತಮ್ಮ ಬಳಿ ಬರುವ ರೋಗಿಗಳ ಆ ಕ್ಷಣದ ಕಾಯಿಲೆಗೆ ಚಿಕಿತ್ಸೆ ಕೊಡುವುದಷ್ಟೇ ಅವರ ಗುರಿ ಅಲ್ಲ, ದೀರ್ಘಕಾಲಿಕವಾಗಿ ಆರೋಗ್ಯ ಕಾಪಾಡಿಕೊಳ್ಳಲು ಬೇಕಾದ ಸಲಹೆಗಳನ್ನೂ ನೀಡುತ್ತಾರೆ. ಆರ್ಥಿಕವಾಗಿ ಕಷ್ಟದಲ್ಲಿರುವವರಿಗಂತೂ ಅವರದು ಉಚಿತ ಚಿಕಿತ್ಸೆಯ ಔದಾರ್ಯ. ವೃತ್ತಿ ಹಾಗೂ ಸಾಮಾಜಿಕವಾಗಿ ಸರಳ – ಸಜ್ಜನಿಕೆಯಿಂದ, ಸಂಯಮದಿಂದ ವರ್ತಿಸುವ ಅವರ ವ್ಯಕ್ತಿತ್ವ ಅವರಿಗೆ ಜನರ ಅಭಿಮಾನವನ್ನೂ ತಂದುಕೊಟ್ಟಿದೆ, ಅವರ ಏಳಿಗೆಗೂ ಕಾರಣವಾಗಿದೆ.

**ವ್ಯಕ್ತಿಗಳ ಆರೋಗ್ಯಕ್ಕೆ ವೆಂಕಟೇಶ್ವರ ಕ್ಲಿನಿಕ್**

ಡಾ.ಗೌತಮ್ ಆರ್.ಚೌಧರಿ ಅವರು 1995ರಲ್ಲಿ ಬೆಂಗಳೂರಿನ ಅವಲಹಳ್ಳಿಯಲ್ಲಿ ವೆಂಕಟೇಶ್ವರ ಕ್ಲಿನಿಕ್ ಅನ್ನು ಪ್ರಾರಂಭಿಸಿದರು. ಬಳಿಕ ಸುಧಾರಿತ ವೈದ್ಯಕೀಯ ಚಿಕಿತ್ಸಾ ಸೌಲಭ್ಯಗಳುಳ್ಳ ಪಲ್ಸ್ ಆಸ್ಪತ್ರೆಯನ್ನು ಸ್ಥಾಪಿಸಿದರು. ಇದು ಆಧುನಿಕ ವೈದ್ಯಕೀಯ ಸೌಲಭ್ಯಗಳನ್ನು ಜನರಿಗೆ ಒದಗಿಸುವ ಅವರ ಬದ್ಧತೆಯ ದ್ಯೋತಕ. ಆದರೆ, ತಮ್ಮ ತಂದೆ ಮಾಜಿ ಸಚಿವ ಆರ್.ಬಿ.ಚೌಧರಿ ಅವರ ಅಕಾಲಿಕ ನಿಧನದಿಂದಾಗಿ ಅವರು ಪಲ್ಸ್ ಆಸತ್ರೆಯ ಚುಕ್ಕಾಣಿಯನ್ನು ಬಿಟ್ಟು ಹೊರಬರಬೇಕಾಯಿತು. ಆದ–'ರೂ, ಜನರ ಕಡೆಗೆ ಅವರ ತುಡಿತ ನಿಂತಿಲ್ಲ. ಹತ್ತಾರು ಆರೋಗ್ಯ ತಪಾಸಣಾ ಶಿಬಿರಗಳು ಮತ್ತು ದೀನದಲಿತರಿಗೆ

ಉಚಿತ ಶಸ್ತ್ರಚಿಕಿತ್ಸೆಗಳ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸುವುದನ್ನು ನಿರಂತರವಾಗಿ ಮುಂದುವರಿಸಿದ್ದಾರೆ. ತಮ್ಮ ತಂದೆಯವರ ನೆನಪಿಗಾಗಿ ಅವರು ಸ್ಥಾಪಿಸಿದ ಆರ್.ಬಿ.ಚೌಧರಿ ಸ್ಮಾರಕ ಟ್ರಸ್ಟ್ ಮೂಲಕ ಬಡ ಜನರಿಗೆ ವಿವಿಧ ಶಸ್ತ್ರಚಿಕಿತ್ಸೆಗಳನ್ನು ಉಚಿತವಾಗಿ ಮಾಡಿಸಿದ್ದಾರೆ. ಮಹಾರಾಷ್ಟ್ರದ ಲಾತೂರದಲ್ಲಿ ಭೂಕಂಪ ಸಂಭವಿಸಿದಾಗ ಅಲ್ಲಿನ ಸಂತ್ರಸ್ತರಿಗೆ ಸಹಾಯ ಮಾಡುವುದರಿಂದ ಹಿಡಿದು ಕೋವಿಡ್ ಸಾಂಕ್ರಾಮಿಕದ ಸಮುಯದಲ್ಲಿ ಮುಂಚೂಣಿ ಕಾರ್ಯಕರ್ತರಾಗುವವರೆಗೆ ಅವರು ಸಮರ್ಪಣೆಯಿಂದ ಕಾರ್ಯ ನಿರ್ವಹಿಸಿದ್ದಾರೆ. ಕೋವಿಡ್ ಸಂದರ್ಭದಲ್ಲಂತೂ ದಿನಕ್ಕೆ 20 ಗಂಟೆಗಳನ್ನೂ ರೋಗಿಗಳಿಗಾಗಿಯೇ ಮೀಸಲಿಟ್ಟ ಅವರ ಬದ್ಧತೆ ಗಮನಾರ್ಹ.

**ಸಮಾಜದ ಆರೋಗ್ಯಕ್ಕೆ ರಾಜಕೀಯ**

ರಾಜಕಾರಣ ಡಾ.ಗೌತವಮ್ ಆರ್.ಚೌಧರಿಯವರಿಗೆ ಹೊಸದಲ್ಲ, ವಿಜಯಪುರದ ಅತ್ಯಂತ ಗೌರವಾನ್ವಿತ ಚೌಧರಿ ಕುಟುಂಬದಿಂದ ಬಂದ ಮೂರನೇ ತಲೆಮಾರಿನ ರಾಜಕಾರಣಿ ಅವರು, ಡಾ.ಗೌತಮ್ ಆರ್. ಚೌಧರಿ ಅವರ ತಂದೆ ಡಾ.ಆರ್.ಬಿ.ಚೌಧರಿ ಅವರು ಈ ಹಿಂದೆ ವೀರಪ್ಪ ಮೊಯ್ಲಿ ಅವರ ಸಂಪುಟದಲ್ಲಿ ಸಚಿವರಾಗಿದ್ದರು. ದೊಡ್ಡಪ್ಪ ಅವರ ಕೆ.ಬಿ.ಚೌಧರಿ ಲೋಕಸಭೆಯ ಸದಸ್ಯರಾಗಿದ್ದರು. ಅವರ ಅಜ್ಜ ಭೀಮಣ್ಣ ಚೌಧರಿ ಬಿಜಾಪುರದ ಹತ್ತಿ ರಾಜ ಎಂದೇ ಹೆಸರಾಗಿದ್ದರು.

ಪಾರಂಪರಿಕವಾಗಿ ಬಂದ ಈ ಸಮಾಜ ಸೇವೆಯ ಸೆಳೆತ ಡಾ.ಗೌತಮ್ ಆರ್. ಚೌಧರಿಯವರಿಗೂ ಬಂತು. ಸಹಜವಾಗಿಯೇ ಅವರು ಜನಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡರು. ಮಾಜಿ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಅವರ ಆದರ್ಶಗಳು ಮತ್ತು ಭಾರತೀಯ ಜನತಾ ಪಕ್ಷದ ಹಿರಿಯ ನಾಯಕರ ದೃಷ್ಟಿಕೋನ ದಿಂದ ಆಕರ್ಷಿತರಾದ ಅವರು ಕಳೆದ ವಿಧಾನಸಭಾ ಚುನಾವಣೆಯ ಸಮಯದಲ್ಲಿ ಬಿಜೆಪಿಗೆ ಸೇರಿದರು. ಅದಕ್ಕೂ ಮುನ್ನ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ನಲ್ಲಿ ಅವರು ದೀರ್ಘಕಾಲ ಗುರುತಿಸಿಕೊಂಡಿದ್ದರು. ಕೆಪಿಸಿಸಿ ರಾಜ್ಯ ವೈದ್ಯಕೀಯ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ, ರಾಜ್ಯ ಪ್ರಚಾರ ಸಮಿತಿಯ ಸದಸ್ಯರಾಗಿ ಮತ್ತು ಎಐಸಿಸಿ ಮೀನುಗಾರರ ಘಟಕದ ಸದಸ್ಯರಾಗಿ ಅವರು ಸೇವೆ ಸಲ್ಲಿಸಿದ್ದರು.

"ಪ್ರಧಾನಿ ನರೇಂದ್ರ ಮೋದಿ ಮತ್ತು ಮಾಜಿ ರಾಷ್ಟ್ರಪತಿ ರಾಮನಾಥ್



ಕೋವಿಂದ್ ಹಾಗೂ ಹಿರಿಯ ಬಿಜೆಪಿ ನಾಯಕರ ಆದರ್ಶಗಳಿಂದ ಆಕರ್ಷಿತನಾಗಿ 2018ರ ವಿಧಾನಸಭಾ ಚುನಾವಣೆಯ ವೇಳೆಗೆ ಬಿಜೆಪಿ ಸೇರಿದೆ. ಆ ಬಳಿಕ ಪಕ್ಷದ ಎಲ್ಲಾ ಚಟುವಟಿ–ಕೆಗಳು ಮತ್ತು ಚುನಾವಣೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದೇನೆ" ಎನ್ನುತ್ತಾರೆ ಡಾ.ಗೌತಮ್ ಆರ್.ಚೌಧರಿ.

"ನಾನು ಜನಕೇಂದ್ರಿತ ಮತ್ತು ಅಭಿವೃದ್ಧಿ ಆಧರಿತ ರಾಜಕೀಯ ಮಾಡಲು ಬಯಸುತ್ತೇನೆ. ಒಂದು ಗುರಿಯನ್ನು ಇಟ್ಟುಕೊಂಡು ಅದನ್ನು ತಲುಪುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವುದೇ ಯಶಸ್ಸಿನ ಕೀಲಿಯಾಗಿದೆ ಎಂದು ನಾನು ನಂಬುತ್ತೇನೆ. ಬಡರೋಗಿಗಳ ಸೇವೆಯಲ್ಲಿಯೇ ನನ್ನ ದಿ.ತಂದೆಯವರನ್ನು ಕಾಣುತ್ತೇನೆ."

**– ಡಾ.ಗೌತಮ್ ಆರ್.ಚೌಧರಿ**
ಸಂಸ್ಥಾಪಕ, ವೆಂಕಟೇಶ್ವರ ಆರೋಗ್ಯ ಕೇಂದ್ರ

**ವಿಜಯ ಕರ್ನಾಟಕ" ಪತ್ರಿಕೆಯ "ಹೆಲ್ತ್ ಎಕ್ಸಲೆನ್ಸ್ 2024" ಪ್ರಶಸ್ತಿ ಪುರಸ್ಕೃತ**

### ಕುಟುಂಬ ಮತ್ತು ಶಿಕ್ಷಣ

ವಿಜಯಪುರದಲ್ಲಿ ಹುಟ್ಟಿ ಬೆಳೆದ ಡಾ.ಗೌತಮ್ ಆರ್.ಚೌಧರಿ ಅವರು ಮುದ್ದೇಬಿಹಾಳದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಣವನ್ನು ಪಡೆದ ನಂತರ ವಿಜಯಪುರದ ಅಲ್–ಅಮೀನ್ ಕಾಲೇಜಿನಲ್ಲಿ ಎಂಬಿಬಿಎಸ್ ಪೂರ್ಣಗೊಳಿಸಿದರು. ಜಯದೇವ ಇನ್ ಸ್ಟಿಟ್ಯೂಟ್‌ನಲ್ಲಿ ಸ್ವಲ್ಪ ಸಮಯ ಕೆಲಸ ಮಾಡಿದ ನಂತರ ಅವರು ಬೆಂಗಳೂರಿನಲ್ಲಿ ತಮ್ಮದೇ ಆದ ವೈದ್ಯ ಅಭ್ಯಾಸವನ್ನು ಪ್ರಾರಂಭಿಸಿದರು. ನಂತರ ಅವರು ಇಗ್ನೋ ಮೂಲಕ ಗೋವಾ ವೈದ್ಯಕೀಯ ಕಾಲೇಜಿನಿಂದ ತಾಯಿ ಮತ್ತು ಮಕ್ಕಳ ಆರೋಗ್ಯ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪಡೆದರು.

### ಪ್ರಶಸ್ತಿ ಮತ್ತು ಸಾಧನೆ

* "ವಿಜಯ ಕರ್ನಾಟಕ" ಪತ್ರಿಕೆ ಕೊಡಮಾಡುವ "ಹೆಲ್ತ್ ಎಕ್ಸಲೆನ್ಸ್ 2024" ಪ್ರಶಸ್ತಿ
* 2004ರ ಸಾಲಿನ ಇಂದಿರಾ ಪ್ರಿಯದರ್ಶಿನಿ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.
* ಸತತ 100 ಗಂಟೆಗಳ ಕಾಲ ನಡೆದ 'ರಂಗ ಶತಕ' ನಾಟಕ ಕಾರ್ಯಕ್ರಮಕ್ಕೆ ಉಚಿತ ವೈದ್ಯಕೀಯ ನೆರವು ನೀಡುವ ಮೂಲಕ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಅವರು ಸ್ಥಾನ ಪಡೆದಿದ್ದಾರೆ.
* ಹಲವಾರು ಮಠ–ಮಾನ್ಯಗಳು ಮತ್ತು ಸಂಘ ಸಂಸ್ಥೆಗಳ ಪ್ರಶಸ್ತಿ – ಗೌರವ.



### ಶಾಲೆಯ ವಾರ್ಷಿಕೋತ್ಸವದಲ್ಲಿ ಶಾಸಕ ಅಶೋಕ ಮನಗೂಳಿ ಭರವಸೆ

# ಅಂಜುಮನ್ ಸಂಸ್ಥೆಗೆ ರೂ.25ಲಕ್ಷ ಮಂಜೂರು



**ಉದಯರಶ್ಮಿ ನ್ಯೂಸ್**

ಸಿಂದಗಿ: ಅಂಜುಮನ್ ಸಂಸ್ಥೆಯ ಸುಸಜ್ಜಿತ ಕಟ್ಟಡಕ್ಕೆ ಶಾಸಕರ ಅನುದಾನದಲ್ಲಿ 25ಲಕ್ಷ ರೂ. ಮಂಜೂರು ಮಾಡಿಸಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಅಂಜುಮನ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ನಡೆದ ನ್ಯೂ ಎರಾ ಆಂಗ್ಲ ಮಾಧ್ಯಮ ಪ್ರೌಢ ಶಾಲೆಯ 15ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಜ್ಯೋತಿ ಬೆಳಗಿಸಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾವಿರಾರು ವಿದ್ಯಾರ್ಥಿಗಳ ಜೀವನಕ್ಕೆ ಸಾಕ್ಷಿಯಾದ ಸಿಂದಗಿ ಪಟ್ಟಣ ಶಿಕ್ಷಣದ ಕಾಸಿ ಎಂದೇ ಹೆಸರು ವಾಸಿಯಾಗಿದೆ. ಪಟ್ಟಣದಲ್ಲಿ ಶಿಕ್ಷಣ ಕ್ರಾಂತಿ ಸಾರಿದ ಕೀರ್ತಿ ದಿ.ಎಂ.ಸಿ.ಮನಗೂಳಿ ಅವರಿಗೆ ಸಲ್ಲುತ್ತದೆ. ತಂದೆಯವರ ಆಶಯದಂತೆ ನಾನು ಕೂಡಾ ಶಿಕ್ಷಣ ಕ್ಷೇತ್ರಕ್ಕೆ ಮೊದಲ ಆದ್ಯತೆ ನೀಡುತ್ತೇನೆ. ಹಾಗಾಗಿ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇಯಾದ ಇತಿಹಾಸ ಹೊಂದಿದೆ. ಯುವ ಪೀಳಿಗೆ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಶಿಕ್ಷಣ ಇಲ್ಲದ ಜೀವನ ಕಗ್ಗತ್ತಲು ಇದ್ದಂತೆ. ಒಮ್ಮೆ ಕಳೆದುಕೊಂಡ ವಿದ್ಯಾರ್ಥಿ ಜೀವನ ಕೋಟಿ ಕೊಟ್ಟರು ಬಾರದು. ತಂದೆ-ತಾಯಿಗಳು ಮಗ ಉತ್ತಮ ವ್ಯಾಸಂಗ ಮಾಡಿ ಉನ್ನತ ಹುದ್ದೆಯನ್ನು ಅಲಂಕರಿಸುತ್ತಾನೆ ಎಂಬ ಆಶಯವನ್ನಿಟ್ಟು ವಿದ್ಯಾಭ್ಯಾಸಕ್ಕೆ ಕಳುಹಿಸಿರುತ್ತಾರೆ. ವಿದ್ಯಾರ್ಥಿಗಳಾದ ತಾವು ತಮ್ಮ ತಂದೆ-ತಾಯಿಗಳು ಇಟ್ಟಿರುವ ಭರವಸೆ ಹುಸಿ ಹೋಗದಂತೆ ಉತ್ತಮ ಗುಣಮಟ್ಟದ ಶಿಕ್ಷಣ ಪಡೆದುಕೊಳ್ಳಬೇಕು. ದುಶ್ಚಟಗಳಿಂದ ದೂರ ಇರಬೇಕು ನಿಮ್ಮ ಉಡುಪು ಬೇರೆ ವಿದ್ಯಾರ್ಥಿಗಳಿಗೆ ಸ್ಫೂರ್ತಿಯಾಗಬೇಕು ಎಂದು ಸಲಹೆ ನೀಡಿದರು.

ಈ ವೇಳೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಕ್ಕಳ ಸಾಹಿತಿ ಪ.ಗು.ಸಿದ್ದಾಪೂರ ಮಾತನಾಡಿ, ವಿದ್ಯಾರ್ಥಿಗಳು ಸಾಧನೆಗೆ ಮುಂದಾದಾಗ ಸಾವಿರಾರು ಸಂಕಷ್ಟಗಳು ಎದುರಾಗುತ್ತವೆ. ಏನೇ ಕಷ್ಟ ಬಂದರೂ ಕೂಡಾ ಅದನ್ನು ಮೆಟ್ಟಿ ನಿಲ್ಲಬೇಕು. ಮಕ್ಕಳು ಆತ್ಮಸ್ಥೈರ್ಯ ಕಳೆದುಕೊಳ್ಳಬೇಡಿ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಕೊಟ್ಟ ವಿದ್ಯಾರ್ಥಿಗಳ ಜೀವನ ಮಾತ್ರ ಮುಂದಿನ ದಿನಗಳಲ್ಲಿ ಉಜ್ವಲ್ ಭವಿಷ್ಯ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಂಪೂರ ಪಿಎ ಗ್ರಾಮದ ಆರೂಢ ಮಠದ ನಿತ್ಯಾನಂದ ಮಹಾರಾಜರು ಸಾನಿಧ್ಯ ವಹಿಸಿದ್ದರು. ಸಂಸ್ಥೆಯ ಅಧ್ಯಕ್ಷ ಎನ್.ಎ.ದುದನಿ, ಪ್ರಧಾನ ಕಾರ್ಯದರ್ಶಿ ಎಸ್.ಎಂ.ಪಾಟೀಲ್ ಗಣಿಹಾರ್, ಶಿಕ್ಷಣ ಸಂಯೋಜಕ ಸುಧೀರ ಕಮತಗಿ, ನ್ಯೂ ಎರಾ ಶಾಲೆಯ ಅಧ್ಯಕ್ಷ ಎಂ.ಎಸ್ ಹಸಿರುಂಡಗಿ, ನಿರ್ದೇಶಕ ಝುಲ್ಪಿಕರ್ ಅಂಗಡಿ, ಮುಖ್ಯ ಶಿಕ್ಷಕಿ ಲೀಲಾ, ನಾಯಕ್, ಪ್ರಭುಲಿಂಗ ಲೋಣಿ ಸೇರಿದಂತೆ ಶಾಲೆಯ ಸಿಬ್ಬಂದಿಗಳು, ಪಾಲಕರು ಹಾಗೂ ವಿದ್ಯಾರ್ಥಿಗಳಿದ್ದರು.

## ಜಿಲ್ಲಾ ಕಾರ್ಯದರ್ಶಿಯಾಗಿ ದೇವರಮನಿ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಪಟ್ಟಣದ ವಕೀಲ ಮಲ್ಲಿಕಾರ್ಜುನ ದೇವರಮನಿ ಅವರನ್ನು ಭಾರತೀಯ ಜನತಾ ಪಕ್ಷದ ಜಿಲ್ಲಾ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಿ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ಆರ್.ಎಸ್.ಪಾಟೀಲ ಕೂಚಬಾಳ ಆದೇಶ ಹೊರಡಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಸುಂದರ ಬದುಕಿಗೆ ಶಿಕ್ಷಣ ಅಗತ್ಯ : ರುದ್ರಮುನಿ ಶ್ರೀ

**ಉದಯರಶ್ಮಿ ನ್ಯೂಸ್**

ಮೋರಟಗಿ: ಇಂದಿನ ಸ್ಪರ್ಧಾ ಯುಗದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯ ತೆ ಕೊಟ್ಟ ವಿದ್ಯಾರ್ಥಿಗಳ ಜೀವನ ಮಾತ್ರ ಮುಂದಿನ ದಿನಗಳಲ್ಲಿ ಉಜ್ವಜ ಭವಿಷ್ಯ ಕಂಡುಕೊಳ್ಳಲು ಸಾಧ್ಯವಾಗುತ್ತದೆ, ನಾವು ನೋಡಲು ಸುಂದರವಾಗಿದ್ದರೆ ಸಾಲದು, ನಮ್ಮ ಬದುಕು ಸುಂದರವಾಗಬೇಕೆಂದರೆ ಶಿಕ್ಷಣ ಅಗತ್ಯ, ಎಂದು ಅಭಿನವ ರುದ್ರಮುನಿ ಶಿವಾಚಾರ್ಯ ಕುಂಟೋಜಿ ಹಿರೇಮಠದ ಶ್ರೀ ಅಭಿಪ್ರಾಯ ವ್ಯಕ್ತಪಡಿಸಿದರು.



ರವಿವಾರ ಗ್ರಾಮದ ಕಲ್ಪವೃಕ್ಷ ಶಾಲೆಯಲ್ಲಿ ಕನ್ನಡ ಮಾಧ್ಯಮ ಪ್ರಾಥ-ಮಿಕ, ಪ್ರೌಢ ಶಾಲೆ ವಿದ್ಯಾರ್ಥಿಗಳಿಗೆ ಶುಭೋಕೋರು ಸಮಾರಂಭದಲ್ಲಿ ಜ್ಯೋತಿ ಬೆಳಗಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಲ್ಲಿ ಅಡಗಿರುವ ಅಜ್ಞಾನವನ್ನು ಅಳಿಸಿ ಸುಜ್ಞಾನದ ಬೀಜ ಬಿಟ್ಟುತ್ತಿರುವ ಶಿಕ್ಷರ ಪಾತ್ರ ಮಹತ್ವದ್ದು, ವಿದ್ಯೆಯೇ ಬಾಳಿನ ಬೆಳಕು ದಾನಗಳಲ್ಲಿ ವಿದ್ಯಾದಾನ ಕೂಡಾ ಶ್ರೇಷ್ಠವಾದುದ್ದು, ಶಿಕ್ಷಕರು ಹಾಕಿ ಕೊಟ್ಟ ಮಾರ್ಗದಲ್ಲಿ ನಡೆದು ಉತ್ತಮ ಸಂಸ್ಕಾರ ಕಲಿತುಕೊಂಡು ಸುಂದರವಾದ ಬದುಕು ಕಟ್ಟಿಕೊಳ್ಳಬೇಕು ಎಂದರು.

ನಂತರ ದೇವಣಗಾವ ಕ್ಷೇತ್ರದ ಮಾಜಿ ಜಿ. ಪಂ. ಸದಸ್ಯ ಯಶವಂತ್ರಾಯಗೌಡ ಪಾಟೀಲ್ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸುಸಜ್ಜಿತವಾದ ಕಟ್ಟಡ ಕಟ್ಟಿ ಸುಂದರವಾದ ಮೈದಾನ ನಿರ್ಮಿಸಿ ಉತ್ತಮ ಗುಣಮಟ್ಟದ ಶಿಕ್ಷಣ ದಾಸೋಹ ಮಾಡುತ್ತಿರುವ ಕಲ್ಪವೃಕ್ಷ ಸಂಸ್ಥೆಯ ಕಾರ್ಯ ಶ್ಲಾಘನೀಯವಾದುದ್ದು ಪಿಯುಸಿ ಹಾಗೂ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರತಿ ವರ್ಷ ಕೂಡಾ ದಿನ ಪತ್ರಿಕೆಗಳಲ್ಲಿ ವಿದ್ಯಾರ್ಥಿಗಳ ಭಾವ ಚಿತ್ರದೊಂದಿಗೆ ಫಲಿತಾಂಶ ಪ್ರಕಟವಾಗಿದ್ದು ಕಂಡಿದ್ದೇನೆ ಇಲ್ಲಿನ ಶಿಕ್ಷಕರ ಹಾಗೂ ಶಿಕ್ಷಕಿಯರ ಕಾರ್ಯ ಮೆಚ್ಚುವಂತದ್ದು ಎಂದರು.

ವಿಶೇಷ ಸನ್ಮಾನ: ಜೆಇಇ ಮೆನ್ಸ್ ಪರೀಕ್ಷೆಯಲ್ಲಿ ಶೇ.92.28 % ಫಲಿತಾಂಶ ಮಾಡಿ ಸಾಧನೆ ಮಾಡಿದ ಪಾಣಿಪುರಿ ವಿದ್ಯಾರ್ಥಿ ರಾಹುಲ್ ಬಗೇಲ್ ಗೆ ವಿಶೇಷವಾಗಿ ಸನ್ಮಾನಿಸಿ ಸಂಸ್ಥೆಯ ವತಿಯಿಂದ ಸಹಾಯದನ ನೀಡಲಾಯಿತು. ನಂತರ ವಿದ್ಯಾರ್ಥಿಗಳಿಂದ ವಿವಿಧ ರೀತಿಯ ರಸ ಮಂಜರಿ ಕಾರ್ಯಕ್ರಮ ನೃತ್ಯ ಸುಗಮ ಸಂಗೀತ ಜರುಗಿದವು.

ಸಂಸ್ಥಾಪಕ ಅಧ್ಯಕ್ಷ ಶಿವಶರಣಗೌಡ ಬಿರಾದಾರ, ಜನಪದ ಸಾಹಿತಿ ಉಪನ್ಯಾಸಕ ಗುರುರಾಜಾ ಕೆಂದೂಳಿ, ಸಿ. ಆರ್. ಪಿ. ರವಿ ಬಿರಾದಾರ, ಪ್ರಾಂಶುಪಾಲ ಎ.ಬಿ.ಸಿಂದಗಿ, ಪ್ರಾಚಾರ್ಯ ಎಸ್. ಬಿ. ಬಿರಾದಾರ, ಆಡಳಿತ ಅಧಿಕಾರಿ ಎಸ್ ಹೆಚ್ ಧೂಳಬಾ, ಸಮನ್ವಯ ಅಧಿಕಾರಿ ಎಸ್ ವ್ಹಿ ಬಿರಾದಾರ,ಎಸ್ ಎಂ ಲಂಗೋಟಿ, ಆರ್ ಐ ಚೌದರಿ, ಎಸ್ ಬಿ ತಮ್ಮಾಗೋಳ, ಜಿ. ಆರ್. ಧಾನಗೌಡ, ಜಿಲಾನಿ ನಾಗಾವಿ, ಸಿಬ್ಬಂದಿ ವರ್ಗ ಮತ್ತು ಆಡಳಿತ ಮಂಡಳಿ ಇದ್ದರು.

# ಔರಾದಕರ ವರದಿ ಅನುಷ್ಠಾನಕ್ಕೆ ಆಗ್ರಹಿಸಿ ಗೃಹ ಸಚಿವರಿಗೆ ಮನವಿ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಅವರು ಬೆಂಗಳೂರಿನಲ್ಲಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರ ನಿವಾಸದಲ್ಲಿ ಭೇಟಿ ಮಾಡಿ ಔರಾದಕರ ವರದಿ ಅನುಷ್ಠಾನಗೊಳಿಸಿ ಆರಕ್ಷರಕ ಸಂಬಳ ಹೆಚ್ಚಿಸಬೇಕು, ಮೂರು ವರ್ಷ ಒಂದೇ ಕಡೆ ಸೇವೆ ಸಲ್ಲಿಸಿದ ಆರಕ್ಷಕರನ್ನು ಪತಿ, ಪತ್ನಿ ಪ್ರಕರಣದಲ್ಲಿ ಅಂತರ ಜಿಲ್ಲಾ ವರ್ಗಾವಣೆ ಮಾಡಬೇಕೆಂದು ಒತ್ತಾಯಿಸಿ ಮನವಿ ಸಲ್ಲಿಸಿದರು.

ನಂತರ ಸಚಿವರೊಂದಿಗೆ ಮಾತನಾಡಿ, ಹಿಂದಿನ ಪೊಲೀಸ್ ಮಹಾನಿರ್ದೇಶಕರಾಗಿದ್ದ ಔರಾದಕರ ಅವರು ರಾಜ್ಯ ಸರ್ಕಾರಕ್ಕೆ ವರದಿ ಶಿಪಾರಸ್ತು ಮಾಡಿದ್ದಾರೆ. ಇದುವರೆಗೆ ಅವರ ವರದಿ ಜಾರಿ ತಂದಿಲ್ಲ. ರಾಜ್ಯದ ನಾನಾ ಸರ್ಕಾರ ನೌಕರ ಬಾಂಧವರಿಗೆ, ಪೊಲೀಸ್ ಸಿಬ್ಬಂದಿಗಳ ಪಿಂಚಣಿ ಹೋಲಿಸಿದರೆ ವ್ಯತ್ಯಾಸವಿದೆ. ಇದರಿಂದಾಗಿ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ರಾಜ್ಯ ಸರ್ಕಾರ ಮಲತಾಯಿ ಧೋರಣೆ ತೋರಿಸುತ್ತಿದೆ. ಹಗಲು-ರಾತ್ರಿ, ಮಳೆ-ಗಾಳಿ-ಚಳಿ ಎನ್ನದೇ ಪೊಲೀಸ್ ಇಲಾಖೆಯ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಾರೆ. ಇವರು ತಮ್ಮ ಬೇಡಿಕೆಗಾಗಿ ಹೋರಾಟ ಮಾಡುವಂತಿಲ್ಲ. ಒಂದೇ ವೇಳೆ ಹೋರಾಟ ಮಾಡಿದರೆ ಅಂತಹವರನ್ನು ಸೇವೆಯಿಂದ ವಜಾ ಮಾಡುತ್ತಾರೆ. ಇದರಿಂದಾಗಿ ಈ ಇಲಾಖೆಯ ಸಿಬ್ಬಂದಿಗಳಿಗೆ ಅನ್ಯಾಯವಾಗುತ್ತಿದೆ. ಸಚಿವರು ಕೂಡಲೇ ಔರಾದಕರ ವರದಿ ಜಾರಿಗೆ ತರುವ ಮೂಲಕ ಪೊಲೀಸ್ ಇಲಾಖೆಯ ಸಿಬ್ಬಂದಿಗಳಿಗೆ ನ್ಯಾಯ ಒದಗಿಸಬೇಕು. ಅವರ ಪಿಂಚಣಿ ಹೆಚ್ಚಿಸಬೇಕು. ಪತಿ, ಪತ್ನಿ, ಪ್ರಕರಣದಡಿ ಮೂರು ವರ್ಷದವರೆಗೆ ಒಂದೇ ಸ್ಥಳದಲ್ಲಿ ಸೇವೆ ಸಲ್ಲಿಸಿದವರನ್ನು ಅಂತರ ಜಿಲ್ಲಾ ವರ್ಗಾವಣೆ ಮಾಡಬೇಕು. ಈ ಕುರಿತು ಗಂಡ-ಹೆಂಡರ ಮಧ್ಯ ಜಗಳ ಉಂಟಾಗಿ ಎಷ್ಟೋ ಕುಟುಂಬಗಳು ವಿವಾಹ ವಿಚ್ಛೇದನ ಪಡೆದುಕೊಂಡಿರುವ ಪ್ರಕರಣಗಳು ನಡೆದಿವೆ. ಕೂಡಲೇ ಸಚಿವರು ಅಂತರ ಜಿಲ್ಲಾ ವರ್ಗಾವಣೆ ಮಾಡಬೇಕೆಂದು ಮನವಿ ಮಾಡಿಕೊಂಡಿದ್ದೇನೆ ಎಂದು ಅರವಿಂದ ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಯಡ್ರಾಮಿ-ಜೇವರ್ಗಿ ಅವಳಿ ತಾಲೂಕಿನ ಸಮಾವೇಶದಲ್ಲಿ ಬಸವಜಯ ಮೃತ್ಯುಂಜಯ ಸ್ವಾಮೀಜಿ ಎಚ್ಚರಿಕೆ

# ಮೀಸಲಾತಿ ನೀಡದಿದ್ದಲ್ಲಿ ರಾಜ್ಯಾದ್ಯಂತ ಚಳುವಳಿ!

**ಉದಯರಶ್ಮಿ ನ್ಯೂಸ್**

ಯಡ್ರಾಮಿ: ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ದೀಕ್ಷ ಪಂಚಮಸಾಲಿ ಸಮಾಜಕ್ಕೆ 2ಎ ಮೀಸಲಾತಿ ನೀಡುವಂತೆ ಮನವಿ ಮಾಡಿದ್ದೇವೆ. ಇಲ್ಲಿಯವರೆಗೂ ಸಭೆ ಕರೆದು ಮಾಡುತ್ತೇವೆ ಎಂಬ ಆಶ್ವಾಸನೆ ನೀಡುತ್ತಿದ್ದಾರೆ ಹೊರತು ಸ್ಪಷ್ಟನೆ ನೀಡಿಲ್ಲ. ಅಧಿವೇಶನ ಮುಗಿಯುವುದರ ಒಳಗಾಗಿ ಒಂದು ಸ್ಪಷ್ಟತೆಗೆ ಬರಬೇಕು.ಇಲ್ಲವಾದಲ್ಲಿ ರಾಜ್ಯಾದ್ಯಂತ ಮೀಸಲಾತಿ ಚಳುವಳಿ ಪ್ರಾರಂಭ ಮಾಡಲಾಗುವದು ಎಂದು ಕೂಡಲಸಂಗಮ ಪಂಚಮಸಾಲಿ ಮಹಾಪೀಠದ ಶ್ರೀ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಯಡ್ರಾಮಿ ತಾಲೂಕಿನ ಕುಳಗೇ-ರಿಯಲ್ಲಿ ರವಿವಾರದಂದು ರಾಷ್ಟ್ರ ಮಾತೆ ಕಿತ್ತೂರು ರಾಣಿ ಚೆನ್ನಮ್ಮ ಅವರ ಮೂರ್ತಿ ಅನಾವರಣ ಹಾಗೂ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ 2ಎ ಮೀಸಲಾತಿ ಹಕ್ಕೋತ್ತಾಯಿಸಿ ಯಡ್ರಾಮಿ ಹಾಗೂ ಜೇವರ್ಗಿ ಅವಳಿ ತಾಲೂಕಿನ ಪ್ರಥಮ ಸಮಾವೇಶ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಸದ್ಯದಲ್ಲೆ ಲೋಕಸಭಾ ಚುನಾವಣೆ ನಡೆಯಲಿದ್ದು, ರಾಜ್ಯ ಸರ್ಕಾರ ಮೀಸಲಾತಿ ಬಗ್ಗೆ ಆದಷ್ಟು ಬೇಗ ನಿರ್ಣಯ ಕೈಗೊಂಡು ಜಾರಿಗೊಳಿಸಬೇಕು. ವಿಳಂಬವಾದಲ್ಲಿ ಕನಿಷ್ಟಪಕ್ಷ ಓಬಿಸಿ ಮೀಸಲಾತಿ ಒದಗಿಸಿಕೊಡಲು ಮುಂದಾಗಬೇಕು ಎಂದರು.

ಬ್ರಿಟಿಷ್ ಅಧಿಕಾರಿಗಳ ವಿರುದ್ಧ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ದಿಟ್ಟ ಮಹಿಳೆ ಕಿತ್ತೂರು ರಾಣಿ ಚೆನ್ನಮ್ಮಾಜಿ ಅವರ ಇತಿಹಾಸ ಮುಚ್ಚುವಂತ ಕೆಲಸವಾಗಿದ್ದರಿಂದ ಬೆಳಗಾವಿ ಭಾಗಕ್ಕೆ ಮಾತ್ರ ಸೀಮಿತವಾಗಿದೆ. ಇನ್ನು ಮುಂದೆ ಸಂಘಟನೆ ಮಾಡುವ ಮೂಲಕ ಬೆಳಕಿಗೆ ತರುವಂತಹ ಪ್ರಯತ್ನವಾಗಲಿ. ಕಲ್ಯಾಣ ಕರ್ನಾಟಕಕ್ಕೂ ಸಹ ಕಿತ್ತೂರು ರಾಣಿ ಚೆನ್ನಾಮ್ಮಾಜೀ ಅವರ ಅವಿನಾಭವ ಸಂಬಂದವಿದೆ. ಅಂದು ಬ್ರಿಟೀಷರ ವಿರುದ್ಧ ಹೋರಾಟಕ್ಕೆ ಸುರಪೂರದ ವೆಂಕಟಪ್ಪ ನಾಯಕ ಅವರು ಸೈನಿಕರನ್ನು ಕಳುಹಿಸುವ ಮೂಲಕ ಸಹಾಯ ಮಾಡಿದ್ದರು. ಈಗ ಕಲ್ಯಾಣ ಕರ್ನಾಟಕದಲ್ಲಿ ಮೀಸಲಾತಿ ಹೋರಾಟಕ್ಕೆ ಕುಳಗೇರಿ ಗ್ರಾಮದ ಮೂಲಕ ಮುಂದಡಿಯಿಟ್ಟಂತಾಗಿದೆ. ಮಾರ್ಚ 10 ರಂದು ಕಲಬುರಗಿಯಲ್ಲಿ ಜಿಲ್ಲಾ ಮಟ್ಟದ ಸಮಾವೇಶ ಹಮ್ಮಿಕೊಂಡಿದ್ದು, ಜಿಲ್ಲಾದ್ಯಂತ ಪ್ರತಿ ಹಳ್ಳಿಗಳಿಗೆ ಸಂಚರಿಸಿ ಸಂಘಟನೆ ಮಾಡಲು ನಿರ್ದರಿಸಲಾಗಿದೆ. ಸಮಾಜ ಭಾಂದವರು ಜಿಲ್ಲಾ ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ವೀರಶೈವ ಲಿಂಗಾಯತ ನಿಗಮದ ಅದ್ಯಕ್ಷ, ಶಾಸಕ ವಿಜಯಾನಂದ ಕಾಶಪ್ಪನವರ, ಕೆಕೆಆರ್ಡಿಬಿ ಅದ್ಯಕ್ಷ ಶಾಸಕ ಡಾ.ಅಜಯಸಿಂಗ್,ರಾಮನಗೌಡ ಪಾಟೀಲ ಯತ್ನಾಳ,ಗ್ರಾಪಂ ಅದ್ಯಕ್ಷ ಶರಣಗೌಡ ಪಾಟೀಲ ಕುಳಕುಮಟಗಿ, ರಾಣಿ ಚೆನ್ನಮ್ಮ ಮೂರ್ತಿ ಅನಾವರಣ ಸಮಿತಿ ಅದ್ಯಕ್ಷ ಬಾಬುಗೌಡ ಪಾಟೀಲ ಕುಳಗೇರಿ, ಬಿ.ಟಿ.ಪಾಟೀಲ, ಬಿ.ಐ.ಪಾಟೀಲ, ಸಂತೋಷ ಪಾಟೀಲ ಡಂಬಳ, ಕಿರಣ ಕಟ್ಟಿಮನಿ, ರಾಜಶೇಖರ ಸಿರಿ, ಚಂದ್ರಶೇಖರ ಪುರಾಣಿಕ, ಮಲ್ಲನಗೌಡ ಪಾಟೀಲ, ನಿಂಗನಗೌಡ ಪಾಟೀಲ, ಆನಂದ ದೇಶಮುಖ, ವಿಜಯಕುಮಾರ ಬಿರಾದಾರ ಸೊನ್ನ, ಬಾಪುಗೌಡ ಪಾಟೀಲ ಕಲ್ಲಹಂಗರಗಾ, ಮಲ್ಲಿಕಾರ್ಜುನ ಹಲಕರ್ಟಿ ಇದ್ದರು.



> "ಈ ಹಿಂದಿನ ಸರ್ಕಾರ ನಮ್ಮ ಸಮಾಜದ ಮೀಸಲಾತಿ ಹೋರಾಟಕ್ಕೆ ಮಣಿದು 2ಸಿ ಮತ್ತು 2ಡಿ ಎನ್ನುವ ಮೀಸಲಾತಿ ಪ್ರವರ್ಗಗಳನ್ನು ಅನುಷ್ಟಾನಕ್ಕೆ ಬಾರದಂತೆ ರಚಿಸಿ, ಭರವಸೆಗಳಾಗಿಯೇ ಉಳಿದವು. ಕಂದಾಯ ಇಲಾಖೆಯಲ್ಲಿ ಇಲ್ಲಿಯತನಕ ಈ ಪ್ರವರ್ಗಗಳ ಮೀಸಲಾತಿ ಪ್ರಮಾಣ ಪತ್ರಗಳು ದೊರಕುತ್ತಿಲ್ಲ. ಈಗ ನಮ್ಮ ಸರ್ಕಾರಕ್ಕೂ ನಮ್ಮ ಮೀಸಲಾತಿಯ ಹಕ್ಕೊತ್ತಾಯ ಪ್ರಬಲವಾಗಿ ಒತ್ತಾಯಿಸಿದ್ದೇವೆ. ದೀಕ್ಷ ಪಂಚಮಸಾಲಿಗೆ 2ಎ ಮೀಸಲಾತಿ, ಮತ್ತು ಲಿಂಗಾಯತ ಒಳ ಪಂಗಡಗಳನ್ನು ಕೇಂದ್ರ ಸರ್ಕಾರದ ಓಬಿಸಿ ಪಟ್ಟಿಗೆ ಸೇರುವವರೆಗೂ ನಮ್ಮ ಹೋರಾಟ ನಿರಂತರವಾಗಿ ಮುಂದುವರೆಯುತ್ತದೆ. ಇದರಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ".
>
> – **ಡಾ.ವಿಜಯಾನಂದ ಕಾಶಪ್ಪನವರ,** ವೀರಶೈವ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರು

# ಲಾರಿಗೆ ಬೈಕ್ ಡಿಕ್ಕಿ :ಈರ್ವರ ಸಾವು!

**ಉದಯರಶ್ಮಿ ನ್ಯೂಸ್**

ಕೆಂಭಾವಿ: ಲಾರಿಗೆ ಬೈಕ್ ಡಿಕ್ಕಿಯಾಗಿ ಸ್ಥಳದಲ್ಲೇ ಈರ್ವರು ಸಾವನ್ನಪ್ಪಿದ ದುರ್ಘಟನೆ ಕೆಂಭಾವಿ ಹೊರವಲಯದಲ್ಲಿ ನಡೆದಿದೆ.

ಬೈಕ್ ಸವಾರರಾದ ಶಿವನಗೌಡ ಹೊಸಮನಿ ( 25) ಹಾಗೂ ಲಕ್ಷ್ಮಣ (24) ಸ್ಥಳದಲ್ಲೇ ಸಾವನ್ನಪ್ಪಿದ ದುರ್ದೈವಿಗಳು.

ಮೃತರು ಬೊಮ್ಮನಹಳ್ಳಿ ಗ್ರಾಮದ ನಿವಾಸಿಗಳಾಗಿದ್ದು, ಕೆಂಭಾವಿಯಿಂದ ಬೊಮ್ಮನಹಳ್ಳಿ ಗ್ರಾಮಕ್ಕೆ ಬೈಕ್ ಮೇಲೆ ತೆರಳುವಾಗ ಹತ್ತಿ ಸಾಗಿಸುತ್ತಿದ್ದ ಲಾರಿಗೆ ಹಿಂಬದಿಯಿಂದ ಬೈಕ್ ಡಿಕ್ಕಿಯಾದ ಪರಿಣಾಮ ಸ್ಥಳದಲ್ಲೇ ಇಬ್ಬರೂ ಯುವಕರು ದುರ್ಮರಣ ಹೊಂದಿದ್ದಾರೆನ್ನಲಾಗಿದೆ.

ಸ್ಥಳಕ್ಕೆ ಕೆಂಭಾವಿ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ.

# ಬಸ್‌ಗಳ ಡಿಕ್ಕಿ: 40ಕ್ಕೂ ಹೆಚ್ಚು ಪ್ರಯಾಣಿಕರಿಗೆ ಗಾಯ!

**ಉದಯರಶ್ಮಿ ನ್ಯೂಸ್**

ಚಡಚಣ: ಪಟ್ಟಣದ ಹೊರವಲಯದಲ್ಲಿ ಎರಡು ಸರಕಾರಿ ಬಸ್‌ಗಳ ನಡುವೆ ಹಿಂಬದಿಯಿಂದ ಅಪಘಾತ ಸಂಭವಿಸಿ ಸುಮಾರು 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಸೇರಿದಂತೆ ಪ್ರಯಾಣಿಕರು ಗಾಯಗೊಂಡಿದ್ದು, ಅದೃಷ್ಟವಶಾತ್ ಪ್ರಾಣಾಪಾಯದಂದ ಪಾರಾದ ಘಟನೆ ಸೋಮವಾರ ಬೆಳಗಿನ ಜಾವ ಸಂಭವಿಸಿದೆ.





ಈ ಘಟನೆ ಇಂಡಿಯಿಂದ ಹಲಸಂಗಿ ಬತಗುಣಕಿ ಮಾರ್ಗವಾಗಿ ಚಡಚಣಕ್ಕೆ ತೆರಳುತ್ತಿದ್ದ ಎರಡು ಕೆಎಸ್‌ಆರ್‌ಟಿಸಿ ಬಸ್‌ಗಳ ಎದುರಿನಿಂದ ವೇಗವಾಗಿ ಬಂದಂತಹ ಶಾಲಾ ವಾಹನದ ಕಾರಣದಿಂದಾಗಿ ಸಂಭವಿಸಬಹುದಾದ ಅಪಘಾತ ತಪ್ಪಿಸುವುದಕ್ಕೋಸ್ಕರ ಸರಕಾರಿ ಬಸ್ ಚಾಲಕನೋರ್ವ ಇದ್ದಕ್ಕಿದ್ದಂತೆ ಬ್ರೇಕ್ ಹಾಕಿದ್ದಾನೆ. ಆದರೆ ಇದರ ಹಿಂಬದಿಯಲ್ಲಿ ಇದೇ ರಸ್ತೆಯಲ್ಲಿ ಬರುತ್ತಿದ್ದಂತಹ ಇನ್ನೊಂದು ಸರಕಾರಿ ಬಸ್ ಚಾಲಕ ಸಹ ಬ್ರೇಕ್ ಹಾಕಲು ಯತ್ನಿಸಿದ್ದಾನಾದರೂ ಮುಂದಿನ ಬಸ್‌ಗೆ ಚಾಲಕನ ನಿಯಂತ್ರಣ ತಪ್ಪಿ ಮುಂಬದಿಯ ಬಸ್‌ಗೆ ಹಿಂಬದಿಯಿಂದ ಬಸ್ ಢಿಕ್ಕಿಯಾದ ಪರಿಣಾಮ ಈ ಅಪಘಾತ ಸಂಭವಿಸಿದೆ.

ಕೆಎ-28 ಎಫ್-1727 ಮತ್ತು ಕೆಎ-28 ಎಫ್-1766 ಸಂಖ್ಯೆಯ ಸರಕಾರಿ ಬಸ್‌ಗಳ ಡಿಕ್ಕಿಯಾದ ಪರಿಣಾಮ ಬಸ್ ಮುಂಬದಿ ಹಾಗೂ ಹಿಂಬದಿ ಭಾಗ ಜಖಂಗೊಂಡಿದೆ. ಬಸ್‌ಗಳಲ್ಲಿ ಚಡಚಣ ಪಟ್ಟಣಕ್ಕೆ ಪರೀಕ್ಷೆಗೆ ಆಗಮಿಸುತ್ತಿದ್ದ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ 40ಕ್ಕೂ ಹೆಚ್ಚು ಪ್ರಯಾಣಿಕರಿಗೆ ಸಣ್ಣ ಪುಟ್ಟ ಗಾಯಗಳಾಗಿದ್ದು, ಇನ್ನು ಎಂಟರಿಂದ 10 ಜನ ಪ್ರಯಾಣಿಕರಿಗೆ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಕಳುಹಿಸಿಕೊಡಲಾಗಿದೆ.

ಪ್ರಕರಣ ಚಡಚಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.

# ಸಿಂದಗಿ: ವಿವಿಧೆಡೆ ಶಿವಾಜಿ ಮಹಾರಾಜರ ಜಯಂತಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಶಿವಾಜಿ ಮಹಾರಾಜರು ಒಬ್ಬ ಅದ್ಭುತ ಸಾಮ್ರಾಟ ತನ್ನ ಯುದ್ಧ ಕಲೆಗಳಿಂದಲೇ ಸಾಮ್ರಾಜ್ಯವನ್ನು ಕಟ್ಟಿದ ಧೀರ ಎಂದು ಇಂಡಿ ಶಾಸಕ ಯಶವಂತ್ರಾಯಗೌಡ ಪಾಟೀಲ ಹೇಳಿದರು.

ತಾಲೂಕಿನ ಗೋಲಗೇರಿ ಗ್ರಾಮದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಲೆ ಮತ್ತು ಜೀವನದ ಸಂಸ್ಕೃತಿಗಳನ್ನು ಶಿವಾಜಿ ಮಹಾರಾಜರು ತನ್ನ ತಾಯಿಯಿಂದಲೇ ಕಲಿತ ವಿದ್ಯೆಗಳಾಗಿದ್ದವು. ಮಹಾಪುರುಷರ ಆಚರಣೆಗಳನ್ನು ಕೇವಲ ಜಾತಿಗಳಿಗೆ ಸೀಮಿತಗೊಳಿಸದೆ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು ಎಂದು ಹೇಳಿದರು

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ರವಿರಾಜ ದೇವರಮನಿ, ಬಸವರಾಜ ಮಾರಲಭಾವಿ, ಪತ್ರಕರ್ತ ಮಲ್ಲು ಕೆಂಭಾವಿ, ಮಡಿವಾಳ ನಾಯ್ಕೋಡಿ, ಕುಮಾರ ಗೊಂಧಳಿ, ನೀಲಕಂಠ ಚಲವಾದಿ, ಬಾಬು ಜಾಲವಾದಿ, ಗೋಲ್ಲಾಳ ನಾಯ್ಕೋಡಿ, ಮಹಾಂತೇಶ ಗೊಂಧಳಿ, ಭೈರವ ಬನ್ನೆ, ರಾಜಾರಾಮ ಗೊಂಧಳಿ, ಸುದೀಪ ಗೊಂಧಳಿ, ಚೌಡು ಹಡಪದ ಸೇರಿದಂತೆ ಅನೇಕರು ಇದ್ದರು.

ತಾಲೂಕು ಆಡಳಿತ: ಪಟ್ಟಣದ ತಾಲೂಕು ಆಡಳಿತ ಸೌಧದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯೋತ್ಸವ ಆಚರಣೆ ಮಾಡಲಾಯಿತು. ಈ ವೇಳೆ ತಹಶೀಲ್ದಾರ್ ಪ್ರದೀಪಕುಮಾರ ಹಿರೇಮಠ, ಕಂದಾಯ ನಿರೀಕ್ಷಕ ಐ.ಎ.ಮಕಾಂದಾರ, ಜಿ.ಎಸ್.ರೋಡಗಿ, ನಿಖಿಲ ಖಾನಾಪೂರ, ಕಸಾಪ ಮಾಜಿ ತಾಲೂಕಾಧ್ಯಕ್ಷ ಚಂದ್ರಶೇಖರ ದೇವರೆಡ್ಡಿ ಸೇರಿದಂತೆ ಸಿಬ್ಬಂದಿಗಳು ಇದ್ದರು.



ಶಿಶು ಅಭಿವೃದ್ಧಿ ಯೋಜನಾ ಅಧಿಕಾ-ರಿಗಳ ಕಾರ್ಯಾಲಯ:

ಪಟ್ಟಣದ ಎಪಿಎಂಸಿ ಯಾರ್ಡನಲ್ಲಿರುವ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾ-ರಿಗಳ ಕಛೇರಿಯಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯೋತ್ಸವ ಆಚರಣೆ ಮಾಡಲಾಯಿತು. ಈ ವೇಳೆ

ಸಿಡಿಪಿಒ ಶಂಭುಲಿಂಗ ಹಿರೇಮಠ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಪೂಜಾ ಸಮಾರಂಭದಲ್ಲಿ ಎಸಿಡಿಪಿಒ ಎಸ್.ಎನ್. ಕೋರವಾರ, ವಿಜಯಕುಮಾರ ಸೇ-ರಿದಂತೆ ಮೇಲ್ವಿಚಾರಕಿಯರು ಮತ್ತು ಸಿಬ್ಬಂದಿಗಳು ಇದ್ದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR